# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 | Issue : 60 | MONDAY 11-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ವರ್ಷಾಂತ್ಯಕ್ಕೆ ಗ್ರಾಮ ಪಂಚಾಯಿತಿ ಚುನಾವಣೆ- ಪ್ರಿಯಾಂಕ್ ಖರ್ಗೆ!



**ಬೆಳಗಾವಿ ವಾರ್ತೆ ಕಲಬುರಗಿ:** ಈ ವರ್ಷದ ಡಿಸೆಂಬರ್ ಅಂತ್ಯದೊಳಗೆ ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ಚುನಾವಣೆ ನಡೆಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಿಯಾಂಕ್ ಖರ್ಗೆ, ಗ್ರಾಮ ಪಂಚಾಯಿತಿ ಗಡಿ ಗುರುತಿಸುವಿಕೆಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನ (ಮೇ 8) ಮುಗಿದಿದ್ದು, ಶೀಘ್ರದಲ್ಲೇ ಚುನಾವಣೆ ನಡೆಯಲಿದೆ. ಬಳಿಕ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆಗಳು ಸಹ ನಡೆಯಲಿವೆ ಎಂದು ಅವರು ಹೇಳಿದರು.

ಕಲಬುರಗಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯ ಕುರಿತಾದ ಪ್ರಶ್ನೆಗೆ ಉತ್ತರಿಸಿದ ಅವರು, ಕುಡಿಯುವ ನೀರಿಗೆ ಯಾವುದೇ ಹಣದ ಕೊರತೆಯಿಲ್ಲ. ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳ 21 ಗ್ರಾಮಗಳಲ್ಲಿ ಹೊಸ ಕೊಳವೆಬಾವಿಗಳನ್ನು ಕೊರೆಯಲಾಗಿದೆ. ಟ್ಯಾಂಕರ್‌ಗಳ ಮೂಲಕ 4 ಗ್ರಾಮಗಳಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ಬೇಸಿಗೆಯಲ್ಲಿ ನೀರು ಒದಗಿಸಲು ಪ್ರತಿ ಜಿಲ್ಲೆಗೆ 5 ಕೋಟಿ ರೂ. ಅನುದಾನ ನೀಡಲಾಗಿದೆ. ಇಷ್ಟು ಹಣವನ್ನು ಖರ್ಚು ಮಾಡಿದ ನಂತರ ಅಗತ್ಯವಿದ್ದರೆ ಹೆಚ್ಚಿನ ಹಣವನ್ನು ಒದಗಿಸಲಾಗುವುದು ಎಂದು ತಿಳಿಸಿದರು.

ಅಲ್ಲದೇ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ವ್ಯಾಪ್ತಿಗೆ ಬರುವ ಜಿಲ್ಲೆಗಳಿಗೆ 17.30 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಶಾಸಕರ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ರಚಿಸಲಾಗಿದ್ದು, ಈ ಟಾಸ್ಕ್ ಫೋರ್ಸ್ ನಿರ್ಧರಿಸಿದಂತೆ ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಬೇಸಿಗೆಯಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಕಲಬುರಗಿ ಜಿಲ್ಲೆಯ ಶಾಸಕರಾದ ಎಂ.ವೈ. ಪಾಟೀಲ್ ಮತ್ತು ಬಿ.ಆರ್. ಪಾಟೀಲ್ ಅವರೊಂದಿಗೆ ಉಪಮುಖ್ಯಮಂತ್ರಿ ಮತ್ತು ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿದ್ದು, ಭೀಮಾ ನದಿಯಿಂದ ಕುಡಿಯುವ ನೀರು ಬಿಡುಗಡೆ ಮಾಡುವಂತೆ ಮಹಾರಾಷ್ಟ್ರವನ್ನು ಒತ್ತಾಯಿಸಿದರು.

## "ಯಾವ ಪುರುಷಾರ್ಥಕ್ಕೆ BSY ಅಭಿಮಾನೋತ್ಸವ? ಹೈಕಮಾಂಡ್ ಮುಂದೆ ಬ್ಲಾಕ್ ಮೇಲ್ ತಂತ್ರ ಅಷ್ಟೆ": ಬಸನಗೌಡ ಪಾಟೀಲ್ ಯತ್ನಾಳ್

**ಬೆಳಗಾವಿ ವಾರ್ತೆ ಬೆಂಗಳೂರು:** ಕರ್ನಾಟಕದಲ್ಲಿ ಜನರ ಭಾವನೆಗಳನ್ನು ಗುರುತಿಸಲಾಗದಷ್ಟು ಬಿಜೆಪಿ ಹೈಕಮಾಂಡ್ ದುರ್ಬಲವಾಗಿದೆ ಎಂದು ನನಗನ್ನಿಸುತ್ತದೆ ಎಂದು ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಬಿ ವೈ ವಿಜಯೇಂದ್ರ ಅವರನ್ನು ತೆಗೆದುಹಾಕಿ ಹಿಂದುತ್ವ, ಅಭಿವೃದ್ಧಿಪರ ಕೆಲಸ ಮಾಡುವ ಬೇರೆ ನಾಯಕರಿಗೆ ನಾಯಕತ್ವ ನೀಡಿದರೆ ಕರ್ನಾಟಕದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುತ್ತದೆ, ಇದೇ ಯಡಿಯೂರಪ್ಪ, ವಿಜಯೇಂದ್ರ ಅವರೇ ಮುಂದುವರಿದರೆ ಬಿಜೆಪಿ ಕರ್ನಾಟಕದಲ್ಲಿ ಮತ್ತೆ ಮಣ್ಣುಮುಕ್ಕುತ್ತದೆ ಎಂದರು.

ಯಡಿಯೂರಪ್ಪನವರ ಕುಟುಂಬದಲ್ಲಿ ಮತ್ತೆ ಮೂವರು ರಾಜಕೀಯಕ್ಕೆ ಬರಲು ತಯಾರಾಗಿದ್ದಾರೆ, ಬಿ ವೈ ರಾಘವೇಂದ್ರ ಪುತ್ರ ಯುವ ಮೋರ್ಚಾ ಅಧ್ಯಕ್ಷರಾಗಿದ್ದಾರೆ. ವೀರಶೈವ ಮಹಿಳಾ ಘಟಕದ ಅಧ್ಯಕ್ಷೆ ಉಮಾ ಆಗಿದ್ದಾರೆ. ಇವರ ಕೊಡುಗೆ ರಾಜ್ಯಕ್ಕೆ ಏನಿದೆ ಎಂದು ಕೇಳಿದರು.



ಚಿತ್ರದುರ್ಗದಲ್ಲಿ ಬಿಜೆಪಿ ಅಭಿಮಾನೋತ್ಸವದ ಅವಶ್ಯಕತೆ ಏನಿತ್ತು, ಪಕ್ಷದ ಹಿರಿಯ ನಾಯಕರಾದ ಎ ಹೆಚ್ ವಿಶ್ವನಾಥ್ ಅಂಥವರೇ ಹೇಳಿದ್ದಾರೆ, ಅವರು ಒಂದು ಸಮುದಾಯದ ಪ್ರಮುಖ ನಾಯಕರು ಇಂಥದ್ದನ್ನೆಲ್ಲಾ ಕೇಂದ್ರ ನಾಯಕರು ತಿಳಿದುಕೊಳ್ಳಬೇಕು, ಮೋದಿಯವರು ವಂಶ ರಾಜಕಾರಣ ಬೇಡ, ಕುಟುಂಬ ರಾಜಕಾರಣ ನಮ್ಮಲ್ಲಿ ಇಲ್ಲ, ಭ್ರಷ್ಟಾಚಾರ ಇಲ್ಲ ಎನ್ನುತ್ತಾರೆ, ಹಾಗಾದರೆ ಕರ್ನಾಟಕ ಬಿಜೆಪಿಯೊಳಗೆ ನಡೆಯುತ್ತಿರುವುದೇನು ಎಂದರು.

ಕರ್ನಾಟಕದಲ್ಲಿ ಭ್ರಷ್ಟ ಕುಟುಂಬವನ್ನು ಮುಕ್ತ ಮಾಡಿದರೆ ಬಿಜೆಪಿ 350 ಸೀಟು ಬರುತ್ತದೆ, ಯಡಿಯೂರಪ್ಪ ಆಪರೇಷನ್ ಕಮಲ ಮಾಡಿದರು, 30-50 ಕೋಟಿ ಕೊಟ್ಟರು, ಉಪ ಚುನಾವಣೆ ಆಯಿತು, ಬಾಗಲಕೋಟೆ, ಎಲೆಕ್ಷನ್ ಜನರ ತೀರ್ಪು ಅಲ್ಲ, ಬಾಗಲಕೋಟೆಯಲ್ಲಿ ಜಾತಿ ಆಧಾರ ಮೇಲೆ ಲಿಂಗಾಯಿತರಿಗೆ, ಬ್ರಾಹ್ಮಣರಿಗೆ 10 ಸಾವಿರ ಕೊಟ್ಟರು. ಹಿಂದುಳಿದ ವರ್ಗದವರಿಗೆ 5 ಸಾವಿರ ಕೊಟ್ಟರು, ಒಂದು ಬೂತ್ ಗೆ 25 ಲಕ್ಷ ಹಂಚಿದ್ದಾರೆ ಎಂದು ಆರೋಪಿಸಿದರು.

ಅಪ್ಪ-ಮಗನಿಗೆ ಮಲ್ಲಿಕಾರ್ಜುನ ಖರ್ಗೆ-ಪ್ರಿಯಾಂಕ್ ಖರ್ಗೆ ಅಪ್ಪ-ಮಗನ ವಿರುದ್ಧ ಮಾತನಾಡುವ ಧೈರ್ಯವಿಲ್ಲ, ಉಪ ಚುನಾವಣೆಯಲ್ಲಿ ಸೋತರೂ ಸ್ವಲ್ಪವೂ ದುಃಖಪಡದೆ ಬಿಜೆಪಿ ಆಫೀಸಲ್ಲಿ ಪಶ್ಚಿಮ ಬಂಗಾಳ ಎಲೆಕ್ಷನ್ ಗೆದ್ದ ಸಂಭ್ರಮಾಚರಣೆ ಮಾಡಿದರು.

ಬೇರೆ ರಾಜ್ಯಗಳಲ್ಲಿ ಹಲವು ಬಿಜೆಪಿ ಮುಖ್ಯಮಂತ್ರಿಗಳಿದ್ದಾರೆ, ಯಾರಾದರೂ ಈ ರೀತಿ ಸಂಭ್ರಮಾಚರಣೆ ಮಾಡುತ್ತಾರೆ ಹೇಳಿ, ರಾಜ್ಯಾಧ್ಯಕ್ಷ ಬದಲಾವಣೆ ಆಗುತ್ತದೆ ಎಂದು ಅವರಿಗೆ ಖಚಿತವಾಗಿದೆ, ಹೀಗಾಗಿ ಯಡಿಯೂರಪ್ಪ ಸಂಭ್ರಮಾಚರಣೆ ಮಾಡುತ್ತಾರೆ, ನಮ್ಮ ಹಿಂದೆ ಲಿಂಗಾಯತರಿದ್ದಾರೆ ಎಂದು ತೋರಿಸಿಕೊಳ್ಳಲು ಹೈಕಮಾಂಡ್ ಮುಂದೆ ಬ್ಲಾಕ್ ಮೇಲ್ ಮಾಡಲು ಈ ಅಭಿಮಾನೋತ್ಸವ ಮಾಡುತ್ತಿದ್ದಾರೆ ವಿಜಯೇಂದ್ರಗೆ ಧಮ್ ಇಲ್ಲ, ವಿಧಾನಸೌಧದೊಳಗೆ ರೈತರ ಬಗ್ಗೆ, ರಾಜ್ಯದ ಜನತೆ ಬಗ್ಗೆ ಮಾತನಾಡಿದ್ದಾರೆಯೇ ಎಂದು ಟೀಕಿಸಿದರು.

ಕರ್ನಾಟಕದಲ್ಲಿ ಡಿ ಕೆ ಶಿವಕುಮಾರ್ ಸಿಎಂ ಆದರೆ 10 ಸಲ ಮಾರಾಟ ಮಾಡುತ್ತಾರೆ, ಡಿ ಕೆ ಶಿವಕುಮಾರ್ ದೊಡ್ಡ ರಾಕ್ಷಸ ಇದ್ದಂತೆ ಎಂದರು.

# ರೆಡ್ ಕ್ರಾಸ್ ದಿನಾಚರಣೆ

## ಮಾನವೀಯತೆ ನೆಲೆಯಲ್ಲಿ ಎಲ್ಲರೂ ಒಗ್ಗೂಡಬೇಕು: ಪ್ರೊ. ಪ್ರಕಾಶ ಚೌಡಕಿ



ಮೂಡಲಗಿ: ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ, ವಾಣಿಜ್ಯ ಹಾಗೂ ಬಿಸಿಎ ಮಹಾವಿದ್ಯಾಲಯದ ಯುವ ರೆಡ್ ಕ್ರಾಸ್ ಘಟಕದ ಆಶ್ರಯದಲ್ಲಿ ವಿಶ್ವ ರೆಡ್ ಕ್ರಾಸ್ ದಿನಾಚರಣೆಯನ್ನು ಆಚರಿಸಲಾಯಿತು.

**ಬೆಳಗಾವಿ ವಾರ್ತೆ ಮೂಡಲಗಿ:** ದೇಶದ ಯಾವುದೇ ಭಾಗದಲ್ಲಿ ನೈಸರ್ಗಿಕ ಅಥವಾ ಮಾನವ ವಿಪತ್ತುಗಳಿಗೆ ಬಲಿಯಾದವರನ್ನು ರಕ್ಷಿಸಲು ಮತ್ತು ಪರಿಹಾರ ನೀಡಲು ಮಾನವೀ ಯತೆಯ ನೆಲೆಯಲ್ಲಿ ಎಲ್ಲರೂ ಒಗ್ಗೂಡ ಬೇಕು ಎಂದು ಆಂಗ್ಲಭಾಷಾ ಪ್ರಾಧ್ಯಾಪಕ ಪ್ರೊ. ಪ್ರಕಾಶ ಚೌಡಕಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ, ವಾಣಿಜ್ಯ ಹಾಗೂ ಬಿಸಿಎ ಮಹಾವಿದ್ಯಾಲಯದ ಯುವ ರೆಡ್ ಕ್ರಾಸ್ ಘಟಕದ ಆಶ್ರಯದಲ್ಲಿ ಏರ್ಪಡಿಸಿದ್ದ ವಿಶ್ವ ರೆಡ್ ಕ್ರಾಸ್ ದಿನಾಚರಣೆ ಸಮಾರಂಭದ ಮುಖ್ಯ ಅತಿಥಿ ಸ್ಥಾನದಿಂದ ಮಾತನಾಡಿ,ಇಂದಿನ ಯುವ ಶಕ್ತಿಯನ್ನು ಮೊಬೈಲ್ ಎಂಬ ಮಾಂತ್ರಿಕ ಯಂತ್ರ ಆಳುತ್ತಿದ್ದು, ಶಾಲಾ ಕಾಲೇಜುಗಳು ಯುವ ರೆಡ್ ಕ್ರಾಸ್, ಎನ್‌ಎಸ್‌ಎಸ್, ಸ್ಕೌಟ್ಸ್ ಆ್ಯಂಡ್ ಗೈಡ್ಸ್‌ನಂತಹ ಸ್ವಯಂಸೇವಾ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳನ್ನು ತೊಡಗಿಸುವ ಮೂಲಕ ಸಮಾಜ ಹಾಗೂ ದೇಶ ಕಟ್ಟಲು ಪ್ರೇರೇಪಿಸಬೇಕು ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಆಡಳಿತಾಧಿಕಾರಿ ಡಾ. ಎಸ್.ಎಲ್. ಚಿತ್ರಗಾರ ಮಾತನಾಡಿ, ಯುದ್ಧಗಳು ಮನುಕುಲದ ಮೇಲೆ ಪ್ರತಿಕೂಲ ಪ್ರಭಾವ ಬೀರುತ್ತವೆ. ಅಂತಹ ಸಂದರ್ಭಗಳಲ್ಲಿ ಯುವ ಜನತೆ ವಿಶ್ವ ರೆಡ್ ಕ್ರಾಸ್ ನಂತಹ ಸಂಸ್ಥೆಗಳೊಂದಿಗೆ ಕೈ ಜೋಡಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾಲೇಜಿನ ಯುವ ರೆಡ್ ಕ್ರಾಸ್ ಘಟಕದ ಘಟಕಾಧಿಕಾರಿ ಪ್ರೊ. ಕೆ.ಪಿ. ಡೋಣಿ ಮಾತನಾಡಿ, ಮಾನವೀಯತೆ, ನಿಷ್ಪಕ್ಷಪಾತ, ತಟಸ್ಥತೆ, ಸ್ವಾತಂತ್ರ್ಯ, ಸ್ವಯಂ ಪ್ರೇರಿತ ಸೇವೆ, ಏಕತೆ, ಸಾರ್ವತ್ರಿಕತೆ ಎಂಬ ಏಳು ಮೂಲಭೂತ ತತ್ವಗಳ ಅಡಿಯಲ್ಲಿ ವಿಶ್ವ ರೆಡ್ ಕ್ರಾಸ್ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ ಎಂದರು.


ಲೋಕೇಶ ಹಿಡಕಲ ಸ್ವಾಗತಿಸಿದರು. ಸುನಂದಾ ಅಂಗಡಿ ನಿರೂಪಿಸಿದರು, ಎ.ಎಸ್. ಮಿಶಿನಾಯಕ ವಂದಿಸಿದರು.



**ಬೆಳಗಾವಿ ವಾರ್ತೆ ಉಗರಗೋಳ:** ಸಮೀಪದ ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡಕ್ಕೆ ಶನಿವಾರ ರಂದು ಸಂಗೀತ ದಿಗ್ಗಜ ರಾಜೇಶಕೃಷ್ಣನ್ ಹಾಗೂ ಸಹ ಕಲಾವಿದರು ಭೇಟಿ ನೀಡಿ ಶ್ರೀದೇವಿಯ ದರ್ಶನ ಆಶೀರ್ವಾದ ಪಡೆದುಕೊಂಡರು.

ಯಲ್ಲಮ್ಮ ದೇವಸ್ಥಾನ ವತಿಯಿಂದ ರಾಜೇಶಕೃಷ್ಣನ್ ಹಾಗೂ ಸಹ ಕಲಾವಿದರನ್ನು ಶಾಲೂಹೊದಿಸಿ ಸತ್ಕರಿಸಲಾಯಿತು.

ವಿರುಪಾಕ್ಷಪ್ಪ ಮಾಮನಿ, ಜಗದೀಶ ಕೌಜಗೇರಿ, ಚಿನ್ಮಯ್ ಮಾಮನಿ, ಶ್ರೇಯಸ್ ಮಾಮನಿ, ಚೇತನ್ ಪೌಡಲ್, ರಾಜು ಕಗದಾಳ, ಮಂಜು ದೊಡಮನಿ, ಪಂಡಿತ ಪಿ ರಾಜಶೇಖರಯ್ಯ ಹಾಗೂ ದೇವಸ್ಥಾನ ಸಿಬ್ಬಂದಿ, ಇತರರು ಇದ್ದರು.



**ಬೆಳಗಾವಿ ವಾರ್ತೆ ಉಗರಗೋಳ:** ಸಮೀಪದ ಶ್ರೀಕ್ಷೇತ್ರ ಯಲ್ಲಮ್ಮನ ಗುಡ್ಡಕ್ಕೆ ಶನಿವಾರ ರಂದು ಬೆಂಗಳೂರಿನ ಆಧಾಯ ತೆರಿಗೆ ಆಯುಕ್ತರಾದ ಎಸ್ ಜನಾರ್ಧನ್, ಹಾಗೂ ಜಾರಿನಿರ್ದೇಶನಾಲಯದ ಜಂಟೀ ನಿರ್ದೇಶಕ ಮಲ್ಲಿಕಾರ್ಜುನ ಮಾಮನಿ ಅವರು ಭೇಟಿ ನೀಡಿ ಶ್ರೀದೇವಿಯ ದರ್ಶನ ಆಶೀರ್ವಾದ ಪಡೆದುಕೊಂಡರು,

ದೇವಸ್ಥಾನ ವತಿಯಿಂದ ಎಸ್ ಜನಾರ್ಧನ್ ಹಾಗೂ ಮಲ್ಲಿಕಾರ್ಜುನ ಮಾಮನಿ ಅವರನ್ನು ಶಾಲೂಹೊದಿಸಿ ಸತ್ಕರಿಸಲಾಯಿತು.

ವಿರುಪಾಕ್ಷ ಮಾಮನಿ, ಜಗದೀಶ ಕೌಜಗೇರಿ, ಚಿನ್ಮಯ್ ಮಾಮನಿ, ಚೇತನ ಪಾವಡದ, ಪಂಡಿತ ಪಿ ರಾಜಶೇಖರಯ್ಯ ಹಾಗೂ ದೇವಸ್ಥಾನ ಸಿಬ್ಬಂದಿ ಇದ್ದರು.

## ಪ್ರೌಢ ಶಾಲೆಯ ಆವರಣದಲ್ಲಿ ಶ್ರೀ ಹನುಮನ ನೂತನ ಮೂರ್ತಿ ಪ್ರತಿಷ್ಠಾಪನೆ

**ಬೆಳಗಾವಿ ವಾರ್ತೆ ಗೋಕಾಕ:** ನಿತ್ಯ ಶಾಲೆಯಲ್ಲಿ ಹನುಮಂತ ದೇವರ ದರ್ಶನ... ಇಲ್ಲಿಯ ಪ್ರೌಢ ಶಾಲೆಯ ಮಕ್ಕಳಿಗೆ ದೊರೆತ ಭಾಗ್ಯ..! ಇದೇನು..? ಎಲ್ಲಿ ಅನ್ನುತ್ತೀರಾ... ಇದು ತಾಲೂಕಿನ ಬೆಟಗೇರಿ ಗ್ರಾಮದ ವಿವಿದೇ ಸರಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಇತ್ತೀಚೆಗೆ ವೀರಾಂಜನೇಯ ನೂತನ ಮೂರ್ತಿ ನಿರ್ಮಿಸಲಾಗಿದೆ. ಹೀಗಾಗಿ ನಿತ್ಯ ಈ ಶಾಲೆಯ ಮಕ್ಕಳಿಗೆ, ಶಿಕ್ಷಕರಿಗೆ ಹನುಮಂತ ದರ್ಶನ ಭಾಗ್ಯ ನೀಡುತ್ತಿದ್ದಾನೆ.

**ಪ್ರಾಣ ತ್ಯಾಗ ಮಾಡಿದ ಮಂಗ:** ಬೆಟಗೇರಿ ಗ್ರಾಮದ ವಿವಿದೇ ಸರಕಾರಿ ಪ್ರೌಢ ಶಾಲೆಯ ಮುಂದೆ ಇರುವ ಗಿಡಗಳ ಮೇಲೆ ಕುಳಿತ ಮಂಗಗಳಲ್ಲಿ ಒಂದು ಮಂಗ ಯಾವುದೇ ಅವಘಡ ನಡೆಯದೆ ಆಕಸ್ಮಿಕ ಪ್ರಾಣ ತ್ಯಾಗ ಮಾಡಿದ ಪ್ರಸಂಗ ನಡೆದಿದ್ದು ಒಂದು ವಿಶೇಷವಾಗಿದೆ.

ಈ ಮಂಗನ ಪಾರ್ಥಿವ ಶರೀರ ಅಂತ್ಯ ಸಂಸ್ಕಾರ ಮಾಡಿದ ಸ್ಥಳದಲ್ಲಿ ನೂತನ ಹನುಮನ ಮೂರ್ತಿ ನಿರ್ಮಿಸಿ, ಪ್ರಾಣ ಪ್ರತಿಷ್ಠಾಪನೆ ಮಾಡಲಾಗಿದೆ ಎಂದು ಶಾಲೆಯ ಮುಖ್ಯೋಪಾಧ್ಯಾಯ ರಮೇಶ ಅಳಗುಂಡಿ ತಿಳಿಸಿದ್ದಾರೆ.

**ಮೂರ್ತಿ ಕೊಡುಗೆ:** ಮೂಡಲಗಿ ಶೈಕ್ಷಣಿಕ ವಲಯ ವ್ಯಾಪ್ತಿಯ ಬೆಟಗೇರಿ ಗ್ರಾಮದ ವಿ.ವಿ.ದೇಯಣ್ಣವರ ಸರಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ರಮೇಶ ಅಳಗುಂಡಿ ಅವರ ಸುಪುತ್ರ ದಿ.ಕಿರಣ ರಮೇಶ ಅಳಗುಂಡಿ ಸ್ಮರಣಾರ್ಥ ಇವರ ಸಹೋದರ ಚೇತನ ರಮೇಶ ಅಳಗುಂಡಿ ಅವರು ಸುಮಾರು 50 ಸಾವಿರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿ ಶ್ರೀವೀರಾಂಜನೇಯ ನೂತನ ಮೂರ್ತಿ ಶಾಲೆಗೆ ಕೊಡುಗೆಯಾಗಿ ಸಮರ್ಪಿಸಿದ್ದಾರೆ.

ಶಿಕ್ಷಣಪ್ರೇಮಿ ಚೇತನ ಅಳಗುಂಡಿ ಅವರು ನಮ್ಮೂರಿನ ವಿವಿಡಿ ಸರಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಈ ವೀರಾಂಜನೇಯ ನೂತನ ಮೂರ್ತಿ ನಿರ್ಮಿಸಿದ ಕಾರ್ಯಕ್ಕೆ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ರಾಮಣ್ಣ ನೀಲಣ್ಣವರ, ಸದಸ್ಯರು, ಮುಖ್ಯೋಪಾಧ್ಯಯ ರಮೇಶ ಅಳಗುಂಡಿ, ಶಾಲೆಯ ಸಹಶಿಕ್ಷಕರು, ಅತಿಥಿಶಿಕ್ಷಕರು, ಶಿಕ್ಷಣಪ್ರೇಮಿಗಳು, ವಿದ್ಯಾರ್ಥಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

"ಜಾಗೃತ ಹನುಮಂತ ದೇವರು ಭಕ್ತರ ಇಷ್ಟಾರ್ಥ ಪೂರೈಸುವ ಮಹಾನ್ ಶಕ್ತಿಯುಳ್ಳ ದೇವರು. ಹನುಮನು ಇಂದಿನ ಯುವಕರಿಗೆ ಆದರ್ಶಪ್ರಾಯ. ಶ್ರೀರಾಮನ ಮೇಲೆ ಇದ್ದ ಹನುಮನ ಭಕ್ತಿ, ತತ್ವ ಸಿದ್ಧಾಂತದ ಸ್ಪೂರ್ತಿ ಈ ಶಾಲೆಯ ಮಕ್ಕಳಲ್ಲಿ ಬೆಳೆಯಲಿ ಎಂಬ ಉದ್ದೇಶದಿಂದ ಹನುಮಂತನ ಮೂರ್ತಿ ಈ ಶಾಲೆಯಲ್ಲಿ ನನ್ನ ಸಹೋದರನ ಸ್ಮರಣಾರ್ಥ ನಿರ್ಮಿಸಿ ಕೊಟ್ಟಿದ್ದೇನೆ.*

**ಚೇತನ ರಮೇಶ ಅಳಗುಂಡಿ**
**ಬೆಟಗೇರಿ, ತಾ.ಗೋಕಾಕ**



ಗೋಕಾಕ: ತಾಲೂಕಿನ ಬೆಟಗೇರಿ ವಿ.ವಿ.ದೇ ಸರಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಶ್ರೀ ಹನುಮನ ನೂತನ ಮೂರ್ತಿಚಿತ್ರ.



**ಬೆಳಗಾವಿ ವಾರ್ತೆ ಉಗರಗೋಳ:** ಸಮೀಪದ ಏಳುಕೊಳ್ಳದ ಶ್ರೀರೇಣುಕಾ ಯಲ್ಲಮ್ಮನ ಗುಡ್ಡಕ್ಕೆ ರವಿವಾರ ರಂದು ಶಾಸಕ ರಮೇಶ ಜಾರಕಿಹೊಳಿ ಭೇಟಿ ನೀಡಿ ಆಧಿಶಕ್ತಿ ಯಲ್ಲಮ್ಮ ದೇವಿಯ ದರ್ಶನ, ಆಶೀರ್ವಾದ ಪಡೆದುಕೊಂಡರು,

ಯಲ್ಲಮ್ಮ ದೇವಸ್ಥಾನ ವತಿಯಿಂದ ಶಾಸಕ ರಮೇಶ ಜಾರಕಿಹೊಳಿ ಅವರನ್ನು ವಿರುಪಾಕ್ಷ ಮಾಮನಿ ಶಾಲೂಹೊದಿಸಿ ಸತ್ಕರಿಸಿದರು.

ವಿರುಪಾಕ್ಷ ಮಾಮನಿ, ಅಶ್ವಥ ವೈದ್ಯ, ರಾಜಶೇಖರ ಕಾರದಗಿ, ಅಲ್ಲಮಪ್ರಭು ಪ್ರಭುನವರ, ರಾಮನಗೌಡ ತಿಪರಾಶಿ, ರಾಜು ನಿಡವಣಿ, ಮಹಾರಾಜಗೌಡ ಪಾಟೀಲ ಮಂಜುನಾಥಗೌಡ ಸಂಧಿಮನಿ, ಹಾಗೂ ದೇವಸ್ಥಾನ ಸಿಬ್ಬಂದಿ ಇದ್ದರು.

# ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವಕ್ಕೆ ಸಕಲ ಸಿದ್ಧತೆ: ಸಂಸದ ರಾಜಶೇಖರ್ ಹಿಟ್ನಾಳ್




**ಬೆಳಗಾವಿ ವಾರ್ತೆ ಕೊಪ್ಪಳ:** ಮೇ 11 ರಿಂದ ಮೇ 14ರವರೆಗೆ ನಡೆಯಲಿರುವ ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಕೊಪ್ಪಳ ಸಂಸದರಾದ ಕೆ. ರಾಜಶೇಖರ ಬಸವರಾಜ ಹಿಟ್ನಾಳ ಅವರು ಹೇಳಿದರು.

2026ರ ಶ್ರೀ ಹುಲಿಗೆಮ್ಮದೇವಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳ ಕಛೇರಿ ಸಭಾಂಗಣದಲ್ಲಿ ರವಿವಾರದಂದು ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಈ ವರ್ಷದ ಶ್ರೀ ಹುಲಿಗೆಮ್ಮದೇವಿ ಜಾತ್ರಾ ಮಹೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಈ ಜಾತ್ರೆಯು ನಮ್ಮ ಭಾಗದ ಅತ್ಯಂತ ಪ್ರಸಿದ್ಧ ಧಾರ್ಮಿಕ ಉತ್ಸವವಾಗಿದ್ದು, ಈ ಸಲ ಜಾತ್ರೆಯ 15 ದಿನಗಳ ಅವಧಿಯಲ್ಲಿ ಸುಮಾರು 35 ಲಕ್ಷ ಭಕ್ತರು ಆಗಮಿಸುವ ನಿರೀಕ್ಷೆಯಿದೆ. ಮಹಾರಥೋತ್ಸವದ ದಿನ ಸುಮಾರು 3 ಲಕ್ಷ ಭಕ್ತರು ಆಗಮಿಸುವ ನಿರೀಕ್ಷೆ ಇದೆ. ಶ್ರೀ ಕ್ಷೇತ್ರಕ್ಕೆ ಆಗಮಿಸುವ ಭಕ್ತಾದಿಗಳಿಗೆ ಸುಸಜ್ಜಿತವಾದ ಮೂಲ ಭೂತ ಸೌಕರ್ಯಗಳನ್ನು ಒದಗಿಸಲು ಎಲ್ಲಾ ರೀತಿಯ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗಿದೆ. ಸರ್ಕಾರದ ಶಿಷ್ಟಾಚಾರದಂತೆ ನಡೆಯುವ ಕಾರ್ಯಕ್ರಮಕ್ಕೆ ಮುಜರಾಯಿ ಇಲಾಖೆ ಸಚಿವರಾದ ರಾಮಲಿಂಗರೆಡ್ಡಿ ಅವರು ಉದ್ಘಾಟನೆ ನೆರವೇರಿಸುವರು. ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಅಧಿಕಾರಿಗಳು ಹಾಗೂ ಜಿಲ್ಲೆಯ ಇತರೆ ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಜಾತ್ರೆಯ ಅಂಗವಾಗಿ ನಡೆಯುವ ಮಹಾ ದಾಸೋಹ ಕಾರ್ಯಕ್ರಮಕ್ಕೆ ವಿಶೇಷ ಮಹತ್ವ ನೀಡಲಾಗಿದ್ದು, ದಿನಂಪ್ರತಿ ಸಾವಿರಾರು ಭಕ್ತರಿಗೆ ಉಚಿತ ಅನ್ನದಾನ ವ್ಯವಸ್ಥೆ ಕಲ್ಪಿಸಲಾಗಿದೆ. ಭಕ್ತರಿಗೆ ಯಾವುದೇ ರೀತಿಯ ಅಡಚಣೆ ಉಂಟಾಗದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ. ದೇವಸ್ಥಾನದ ಸುತ್ತಮುತ್ತ ವಿದ್ಯುತ್ ಅಲಂಕಾರ, ರಸ್ತೆ ದುರಸ್ತಿ, ವಾಹನ ನಿಲುಗಡೆ ವ್ಯವಸ್ಥೆ ಸೇರಿದಂತೆ ಸಮಗ್ರ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಭದ್ರತಾ ದೃಷ್ಟಿಯಿಂದ ಪೊಲೀಸ್ ಸಿಬ್ಬಂದಿ ನಿಯೋಜನೆ, ಸಿಸಿಟಿವಿ ನಿಗಾ ವ್ಯವಸ್ಥೆ ಮತ್ತು ನಿಯಂತ್ರಣ ಕೊಠಡಿ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಹೆಚ್ಚುವರಿಯಾಗಿ ಆರೋಗ್ಯ ಇಲಾಖೆಯ ವತಿಯಿಂದ ತಾತ್ಕಾಲಿಕ ವೈದ್ಯಕೀಯ ಶಿಬಿರಗಳು, ತುರ್ತು ಸೇವೆಗಳಿಗಾಗಿ ಆಂಬ್ಯುಲೆನ್ಸ್ ವ್ಯವಸ್ಥೆ ಹಾಗೂ ಅಗ್ನಿಶಾಮಕ ದಳದ ಸಿದ್ಧತೆ ಕೈಗೊಳ್ಳಲಾಗಿದೆ. ಮಹಿಳೆಯರು, ಹಿರಿಯ ನಾಗರಿಕರು ಮತ್ತು ಮಕ್ಕಳಿಗಾಗಿ ವಿಶೇಷ ಸೌಲಭ್ಯಗಳನ್ನು ಒದಗಿಸಲಾಗಿದೆ. ಭಕ್ತಾದಿಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಜಾತ್ರೆಯನ್ನು ಯಶಸ್ವಿಗೊಳಿಸಬೇಕು. ಇದರ ಜೊತೆಗೆ, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಿಕೊಳ್ಳಲು ಹಾಗೂ ಜಿಲ್ಲಾಡಳಿತ ಮತ್ತು ದೇವಸ್ಥಾನದ ಸೂಚನೆಗಳನ್ನು ಎಲ್ಲರೂ ಪಾಲಿಸಬೇಕು ಎಂದು ಸಂಸದರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಹೆಚ್. ಪ್ರಕಾಶ್‌ರಾವ್, ಮುಖಂಡರಾದ ಪ್ರಾಧಿಕಾರದ ಪಾಲಾಕ್ಷಪ್ಪ ಗುಂಗಾಡಿ, ಈರಣ್ಣ ಇಳಿಗೇರ್, ಶರಣಗೌಡ ಪಾಟೀಲ್ ವೆಂಕಟೇಶ್ ವಿ., ಪಂಪಾಪತಿ ರಾಟಿ, ವಿಜಯ್ ಕುಮಾರ್ ಶೆಟ್ಟಿ, ಚಂದನ್ ಶಿವು ದಳಪತಿ, ಹನುಮಂತಪ್ಪ, ಶರಣಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮಹಾದಾಸೋಹಕ್ಕೆ ಚಾಲನೆ:

ಶ್ರೀ ಹುಲಿಗೆಮ್ಮ ದೇವಿ ಜಾತ್ರಾ ಮಹೋತ್ಸವದ ನಿಮಿತ್ತ ಆಯೋಜಿಸಲಾದ ಮಹಾದಾಸೋಹ ಕಾರ್ಯಕ್ರಮಕ್ಕೆ ಸಂಸದರು ಚಾಲನೆ ನೀಡಿದರು. ಇದೇ ವೇಳೆ ಭಕ್ತರಿಗೆ ಪ್ರಸಾದ ಸೇವೆ ಮಾಡಿದರು. ಭಕ್ತರು ಭಕ್ತಿಭಾವದಿಂದ ಮಹಾದಾಸೋಹದಲ್ಲಿ ಪಾಲ್ಗೊಂಡು, ಪ್ರಸಾದವನ್ನು ಸ್ವೀಕರಿಸಿದರು. ಜಾತ್ರೆಯ ದಿನಗಳಲ್ಲಿ ಪ್ರತಿದಿನವೂ ಉಚಿತ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿದೆ.

## ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅವರ 604 ನೇ ಜಯಂತಿ ಕಾರ್ಯಕ್ರಮ

## ಹೇಮರೆಡ್ಡಿ ಮಲ್ಲಮ್ಮ ಸ್ತ್ರೀ ಕುಲಕ್ಕೆ ತಿಲಕ : ವೆಂಕನಗೌಡ ವಟಗಲ್

**ಬೆಳಗಾವಿ ವಾರ್ತೆ ಕೊಪ್ಪಳ:** ಸಂಸಾರದ ಜಂಜಾಟಗಳ ನಡುವೆಯೂ ಭಕ್ತಿ ಮತ್ತು ಸಹನೆಯಿಂದ ಅಧ್ಯಾತ್ಮದ ಉತ್ತುಂಗಕ್ಕೇರಿದ ಹೇಮರೆಡ್ಡಿ ಮಲ್ಲಮ್ಮನವರ ಜೀವನ ಇಂದಿನ ಆಧುನಿಕ ಯುಗದ ಸ್ತ್ರೀಯರಿಗೆ ಹಾಗೂ ಸಮಾಜಕ್ಕೆ ದಾರಿದೀಪವಾಗಿದೆ. ಹೇಮರೆಡ್ಡಿ ಮಲ್ಲಮ್ಮ ಸ್ತ್ರೀ ಕುಲಕ್ಕೆ ತಿಲಕ ಎಂದು ಸಿಂಧನೂರಿನ ನಿವೃತ್ತ ಶಿಕ್ಷಕರು ಹಾಗೂ ಜಾನಪದ ಸಾಹಿತಿಗಳಾದ ವೆಂಕನಗೌಡ ವಟಗಲ್ ಅವರು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕಿನ್ನಾಳ ರಸ್ತೆಯಲ್ಲಿರುವ ಶ್ರೀ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಆಯೋಜಿಸಲಾಗಿದ್ದ ಕನ್ನಡದ ಭಕ್ತಿ ಪರಂಪರೆಯ ಮಹಾನ್ ಶಿವಶರಣೆಯಾದ ಹೇಮರೆಡ್ಡಿ ಮಲ್ಲಮ್ಮ ಮತ್ತು ಮಹಾಯೋಗಿ ವೇಮನ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವುದರ ಮೂಲಕ ಗೌರವ ಅರ್ಪಿಸಿ ಅವರು ಮಾತನಾಡಿದರು.



ಇಂದಿನ ತಾಂತ್ರಿಕ ಯುಗದಲ್ಲಿ ಮನುಷ್ಯ ಸಣ್ಣ ಪುಟ್ಟ ಕಷ್ಟಗಳಿಗೂ ಧೃತಿಗೆಡುತ್ತಿದ್ದಾನೆ. ಅಂತಹ ಸಂದರ್ಭದಲ್ಲಿ ಮಲ್ಲಮ್ಮನವರ ಬದುಕು ನಮಗೆ ಸ್ಥಿತಪ್ರಜ್ಞೆಯನ್ನು ಕಲಿಸುತ್ತದೆ. ಸ್ತ್ರೀ ಶಕ್ತಿಯ ಸಂಕೇತವಾಗಿರುವ ಅವರು, ಸಂಸಾರದಲ್ಲಿದ್ದುಕೊಂಡೇ ಆಧ್ಯಾತ್ಮದ ಉತ್ತುಂಗವನ್ನು ಹೇಗೆ ತಲುಪಬಹುದು ಎಂಬುದಕ್ಕೆ ಅತ್ಯುತ್ತಮ ಉದಾಹರಣೆ ಎಂದು ಹೇಳಿದರು.

ಶ್ರೀ ಶಿವಶರಣೆ ಹೇಮರಡ್ಡಿ ಮಲ್ಲಮ್ಮಳ 604 ನೇ ಜಯಂತಿ ಕಾರ್ಯಕ್ರಮದಲ್ಲಿ 2025-26 ನೇ ಸಾಲಿನ ಪಿಯುಸಿ ದ್ವಿತೀಯ ಹಾಗೂ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಶೇ.85 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಾಸ್ಕಾರ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಶಾಖೆ, ಕೊಪ್ಪಳ ವತಿಯಿಂದ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಸಹಾಯಕ ಆಯುಕ್ತರಾದ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಮಾಜಿ ಶಾಸಕರಾದ ಕೆ. ಬಸವರಾಜ ಹಿಟ್ನಾಳ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ರೆಡ್ಡಿ ಸಮಾಜದ ಮುಖಂಡರಾದ ಜಗದೀಶಪ್ಪ, ಮಹಲಿಂಗಪ್ಪ, ಹೇಮರೆಡ್ಡಿ ಬಿಸರಳ್ಳಿ, ಕಾಶಿನಾಥ ರೆಡ್ಡಿ, ಶಂಕರಗೌಡ ಹಿರೇಗೌಡ್ರು, ಅಂಬರೀಶ್ ಪಾಟೀಲ್, ವೆಂಕರೆಡ್ಡಿ ವಕೀಲರು, ಶರಣಪ್ಪ ವಕೀಲರು, ಸುಭಾಷ್ ರೆಡ್ಡಿ, ಮಹಾಲಿಂಗ ಹರಿಕೇರಿ ಸೇರಿದಂತೆ ರೆಡ್ಡಿ ಸಮಾಜದ ಬಂಧುಗಳು ಉಪಸ್ಥಿತರಿದ್ದರು. ಯಮನೂರಪ್ಪ ಭಜಂತ್ರಿ ಕಲಾ ತಂಡದವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.



**ಬೆಳಗಾವಿ ವಾರ್ತೆ ನವಲಗುಂದ** ತಾಲ್ಲೂಕಿನ ಶಾನವಾಡ ಗ್ರಾಮದ ಶ್ರೀ ಬಸವೇಶ್ವರ ದೇವರ ಜಾತ್ರೆಮಹೋತ್ಸವ ಹಾಗೂ ರಥೋತ್ಸವವು ವಿಜೃಂಭಣೆಯಿಂದ ರಥೋತ್ಸವ ಜರುಗಿತು

## ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಪ್ರಸಕ್ತ 2026-27ನೇ ಸಾಲಿನ ಬೀಳಗಿ ಎಸ್.ಆರ್.ನಿರಾಣಿ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನ ಡಿಪ್ಲೋಮಾ ಪ್ರವೇಶ ಕೋರ್ಸಗಳಿಗೆ ಮೆರಿಟ್ ಹಾಗೂ ರೋಷ್ಟರ ಅನುಗುಣವಾಗಿ ಆಫ್‌ಲೈನ್ ಪ್ರವೇಶ ಅವಧಿಯನ್ನು ವಿಸ್ತರಿಸಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಸಿವಿಲ್ ಇಂಜಿನೀಯರಿಂಗ್, ಕಂಪ್ಯೂಟರ ಸೈನ್ಸ್, ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಶನ್, ಮೆಕ್ಯಾನಿಕಲ್ ಇಂಜಿನೀಯರಿಂಗ್, ಇಲೆಕ್ಟ್ರಿಕಲ್ & ಇಲೆಕ್ಟ್ರಾನಿಕ್ಸ್ ಇಂಜಿನೀಯರಿಂಗ್ ಹೀಗೆ ಒಟ್ಟು 6 ಕೋರ್ಸಗಳಿದ್ದು, ಪ್ರವೇಶಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಟ ಶೇ.35 ರಷ್ಟು ಅಂಕ ಪಡೆದು ಉತ್ತೀರ್ಣರಾದವರಿಗೆ ಮೆರಿಟ್ ಹಾಗೂ ರೋಷ್ಟರ ಅನುಗುಣವಾಗಿ ಆಫ್‌ಲೈನ್ ಮೂಲಕ ಪ್ರವೇಶ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊನಂ. 9980230949 ಗೆ ಸಂಪರ್ಕಿಸುವಂತೆ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರಾದ ಗೌಸ್ ಎಂ.ಸಾಲವತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಪನ್ಯಾಸ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ನಾಡಿನ ಖ್ಯಾತ ಗ್ರಂಥಪಾಲಕ, ವಿವಿಧ ವಿಶ್ವವಿದ್ಯಾಲಯಗಳಲ್ಲಿ ಗ್ರಂಥಪಾಲಕರಾಗಿ ಗ್ರಂಥಾಲಯದ ಅಭಿವೃದ್ದಿಗೆ ಶ್ರೇಷ್ಠ ಕೊಡುಗೆ ನೀಡಿದ್ದ ಪ್ರೊ ಕೆ.ಎಸ್.ದೇಶಪಾಂಡೆ ಅವರ ಜಯಂತಿ ನಿಮಿತ್ ಶ್ರೇಷ್ಠ ಚಿಂತಕರು, ಮಾರ್ಗದರ್ಶಕರು, ಹಿತೈಸಿಗಳಾಗಿದ್ದ ಪೂಜ್ಯನೀಯರಾದ ಪ್ರೊ ಕೆ.ಎಸ್. ದೇಶಪಾಂಡೆ ಅವರ ಭಾವಚಿತ್ರಕ್ಕೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಮಾಲಾರ್ಪಣೆ, ಪುಷ್ಪಾರ್ಪಣೆ ಮಾಡುವ ಮೂಲಕ ಗೌರವ ಅರ್ಪಣೆ ಮಾಡಿ, ನಮನಗಳನ್ನು ಸಲ್ಲಿಸಲಾಯಿತು.

ಕರ್ನಾಟಕ ವಿಶ್ವವಿದ್ಯಾಲಯದ ನಿವೃತ ಪ್ರಾಧ್ಯಾಪಕ, ವಿದ್ಯಾ ಗುರುಗಳಾದ ಪ್ರೊ ಎಸ್ ಎಲ್ ಸಂಗಮ, ರಾಣಿಚೆನ್ನಮ್ಮ ವಿಶ್ವವಿದ್ಯಾಲಯದ ನಿವೃತ ಪ್ರಾಧ್ಯಾಪಕ ಡಾ. ವಿನಾಯಕ ಬಂಕಾಪುರ , ನಿವೃತ ಗ್ರಂಥಪಾಲಕ ಸಿದ್ದಯ್ಯ ಹಿರೇಮಠ, ನಿವೃತ ಗ್ರಂಥಪಾಲಕ ಇಂದೂಧರ ಹಿರೇಮಠ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ನಾಚಿಕರ್ನಾಟಕ ವಚನ ಸಾಹಿತ್ಯ ಪರಿಷತ್ ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಗ್ರಂಥಪಾಲಕ ಮಾರುತಿ ತಲಗೇರಿ, ಗ್ರಂಥಪಾಲಕ ಚಂದ್ರಶೇಖರ ಚನ್ನಂಗಿ, ನಿವೃತ ಗ್ರಂಥಪಾಲಕ ಜಯದೇವ್ ಹಿರೇಮಠ, ನಿವೃತ ಗ್ರಂಥಪಾಲಕ ಡಾ. ಎಸ್.ಕೆ.ಸವಣೂರ, ಪ್ರತಿಭಾ ಕುಲಕರ್ಣಿ, ವೈದ್ಯರಾದ ಡಾ ಸಂಜೀವ ಕುಲಕರ್ಣಿ, ಡಾ ಶಿವಾನಂದ ಕುಬಸದ, ಡಾ ಮುಕಯ್ಯಸ್ವಾಮಿ ಕಳಸೂರಮಠ್, ಡಾ ಅನೂಪ್ ಕುಬಸದ, ನಿವೃತ ಶಿಕ್ಷಕ ವೀರಣ್ಣ ಒಡ್ಡಿನ, ಮುಂತಾದವರು ಇದ್ದರು. ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರ ಕಾರ್ಯಚಟುವಟಿಕೆಗಳನ್ನು ಪತ್ರಿಕೆಗಳ ಮೂಲಕ ಗಮನಿಸಿದ ಪ್ರೊ ಕೆ.ಎಸ್. ದೇಶಪಾಂಡೆ ಅವರು ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರಿಗೆ ಸ್ವತಃ ಪತ್ರ ಬರೆದು ಶ್ಲಾಘಿಸಿದ್ದರು ಎಂಬುದನ್ನು ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ನೆನಪಿಸಿದ್ದಾರೆ. ದೇಶಪಾಂಡೆ ಸರ್ ಅವರನ್ನು ವಿವಿಧ ಸಮಾರಂಭಗಳಲ್ಲಿ ಹಾಗೂ ಅವರ ಮನೆಯಲ್ಲಿ ಭೇಟಿಯಾಗಿದ್ದನ್ನು ಸ್ಮರಿಸಿದ್ದಾರೆ.

## ಕಡಲೆಕಾಳು ಖರೀದಿಗೆ ಕಾಲಾವಧಿ ವಿಸ್ತರಣೆ

**ಬೆಳಗಾವಿ ವಾರ್ತೆ ಗದಗ:** 2025-26ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ರೈತರಿಂದ ಖರೀದಿಸಲು ಗದಗ ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ತೆರೆದು ರೈತರ ನೋಂದಣಿಯೊಂದಿಗೆ ಖರೀದಿ ಪ್ರಕ್ರೀಯೆ ಪ್ರಗತಿಯಲ್ಲಿರುತ್ತದೆ.

2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕಡಲೆಕಾಳು ಉತ್ಪನ್ನವನ್ನು ಖರೀದಿಸಲು ನಿಗಧಿಪಡಿಸಿರುವ ಖರೀದಿ ಕಾಲಾವಧಿಯನ್ನು ಮೇ 28 ರ ವರೆಗೆ ವಿಸ್ತರಿಸಿ ನೋಂದಾಯಿತ ರೈತರಿಂದ ಮಾತ್ರ ಖರೀದಿಸಲು ಆದೇಶಿಸಲಾಗಿದೆ ಎಂದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷರು ಹಾಗೂ ಗದಗ ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚವನಭಾವಿಯಲ್ಲಿ ಮೇ 12ರಿಂದ ಅದ್ದೂರಿ ಶ್ರೀಗದ್ದೆಮ್ಮದೇವಿ-ಶ್ರೀ ದ್ಯಾಮವ್ವ ದೇವಿ' ಜಾತ್ರಾ ಮಹೋತ್ಸವ: ಕಲ್ಲು ಎಳೆಯುವುದು, ತೇರಬಂಡಿ, ಟಗರಿನ ಕಾಳಗ ಪ್ರಮುಖ ಆಕರ್ಷಣೆ ಕ್ರೀಡೆಗಳು

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲೂಕಿನ ಚವನಭಾವಿ ಗ್ರಾಮದಲ್ಲಿ ಪ್ರತಿ ಮೂರು ವರ್ಷಕ್ಕೊಮ್ಮೆ ಅತಿ ವಿಜೃಂಭಣೆಯಿಂದ ಜರುಗುವ ಶ್ರೀ ಗದ್ದೆಮ್ಮದೇವಿ ಹಾಗೂ ಶ್ರೀ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವವು ಇದೇ ಮೇ 12ರಿಂದ ಮೇ 16ರವರೆಗೆ ಐದು ದಿನಗಳ ಕಾಲ ಸಕಲ ಸದ್ಭಕ್ತ ದೈವ ಮಂಡಳಿಯ ಆಶ್ರಯದಲ್ಲಿ ನಡೆಯಲಿದೆ.

ಗ್ರಾಮದ ಗುರು-ಹಿರಿಯರು ಮತ್ತು ದೈವ ಮಂಡಳಿಯು ಬಿಡುಗಡೆ ಮಾಡಿರುವ ಆಮಂತ್ರಣ ಪತ್ರಿಕೆಯಂತೆ, ಪಂಚದಿನಗಳ ಕಾಲ ಧಾರ್ಮಿಕ, ಸಾಂಸ್ಕೃತಿಕ ಮತ್ತು ಸಾಹಸ ಕ್ರೀಡಾ ಕಾರ್ಯಕ್ರಮಗಳು ಜರುಗಲಿವೆ.

**ದೇವಿಯರ ಆಗಮನ ಮತ್ತು ವಾದಿಪ್ರತಿವಾದಿ ಡೊಳ್ಳಿನ ಪದಗಳು:**

ಮೇ 12 ರಂದು ಮಂಗಳವಾರ ಜಾತ್ರೆಯ ಮೊದಲ ದಿನ ಸಾಯಂಕಾಲ 6 ಗಂಟೆಗೆ ದೇವರಗಡ್ಡಿಯಿಂದ ಶ್ರೀ ಗದ್ದೆಮ್ಮದೇವಿಯನ್ನು ಮತ್ತು ಅಡವಿ ಹುಲಗಬಾಳಗಳಿಂದ ಶ್ರೀ ದ್ಯಾಮವ್ವ ದೇವಿಯನ್ನು ಸಕಲ ವಾದ್ಯ ವೈಭವಗಳೊಂದಿಗೆ ಗ್ರಾಮಕ್ಕೆ ಬರಮಾಡಿಕೊಳ್ಳಲಾಗುವುದು. ನಂತರ ಗಂಗಸ್ಥಳ ಮತ್ತು ರಾತ್ರಿ ಇಡೀ ಗ್ರಾಮದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ನಡೆಯಲಿದೆ.

ಮೇ 13 ರಂದು ಬುಧವಾರ ಬೆಳಿಗ್ಗೆ ದೇವಿಯರನ್ನು ದೇವಸ್ಥಾನದಲ್ಲಿ ಪ್ರತಿಷ್ಠಾಪಿಸಿ, ಕುಂಭ ತಿರುಗುವ ಕಾರ್ಯಕ್ರಮದ ನಂತರ ಮಧ್ಯಾಹ್ನ ಉಡಿ ತುಂಬಲಾಗುವುದು. ಅಂದೇ ರಾತ್ರಿ 9:30ಕ್ಕೆ ಹಡಲಗೇರಿಯ ಶ್ರೀ ಅಮೋಘಸಿದ್ದೇಶ್ವರ ಡೊಳ್ಳಿನ ಗಾಯನ ಸಂಘ (ಮುಖ್ಯ ಗಾಯಕರು: ಶ್ರೀಮತಿ ಶಾಂತಾ ಹಡಲಗೇರಿ) ಮತ್ತು ಸಿಂದಗಿಯ ಶ್ರೀ ಹತ್ತಿರೇಶ್ವರ ಡೊಳ್ಳಿನ ಗಾಯನ ಸಂಘ (ಮುಖ್ಯ ಗಾಯಕರು: ಭೀಮಾಶಾ ಮಾಸ್ಟರ್) ಇವರ ನಡುವೆ ರೋಚಕ 'ವಾದಿಪ್ರತಿವಾದಿ ಡೊಳ್ಳಿನ ಪದಗಳ' ಸ್ಪರ್ಧೆ ಜರುಗಲಿದೆ.

ಸಾಹಸ ಕ್ರೀಡೆಗಳು ಮತ್ತು ನಾಟಕ ಪ್ರದರ್ಶನ ಮೇ 14ರಂದು ಗುರುವಾರ ಬೆಳಿಗ್ಗೆಯಿಂದಲೇ ವಿವಿಧ ಸಾಹಸ ಸ್ಪರ್ಧೆಗಳು ಏರ್ಪಾಡಾಗಿವೆ:

**ಕಲ್ಲು ಎಳೆಯುವುದು (ಎರಡು ಮನುಷ್ಯರ ಶಕ್ತಿ):** ಬೆಳಿಗ್ಗೆ 10ಕ್ಕೆ ಜರುಗಲಿದ್ದು, ಪ್ರಥಮ ಬಹುಮಾನ 5001, ದ್ವಿತೀಯ 4001, ತೃತೀಯ 3001 ಇದೆ.

ಭಾರವಾದ ಚೀಲ ಹೊರುವುದು: ಬೆಳಿಗ್ಗೆ 11ಕ್ಕೆ ನಡೆಯಲಿದ್ದು, ಬಹುಮಾನಗಳು ಮೇಲಿನಂತೆಯೇ ಇರುತ್ತವೆ.

ಸಂಗ್ರಾಣಿ ಕಲ್ಲು ಎತ್ತುವುದು: ಮಧ್ಯಾಹ್ನ 12ಕ್ಕೆ ನಡೆಯಲಿದ್ದು, ಬಹುಮಾನಗಳು ಸಮನಾಗಿವೆ.

ನಾಟಕ: ಅಂದೇ ರಾತ್ರಿ 10 ಗಂಟೆಗೆ ಚಿಲ್ಲಾಳಗುಂಡಿಯ ಅಂಜನಿಪುತ್ರ ನಾಟ್ಯ ಸಂಘದಿಂದ ವಿಠ್ಠಲ ಚಿಲ್ಲಾಳಗುಂಡಿ ಅವರ ಹಾಸ್ಯ ನಟನೆಯೊಂದಿಗೆ 'ಮಗ ಹೋದರೂ ಮಾಂಗಲ್ಯ ಬೇಕು' ಎಂಬ ಸಾಮಾಜಿಕ ನಾಟಕ ಪ್ರದರ್ಶನಗೊಳ್ಳಲಿದೆ.

ಮೇ 15 ರಂದು ?ಭಾರಿ ತೇರಬಂಡಿ ಸ್ಪರ್ಧೆ ಮತ್ತು ಟಗರಿನ ಕಾಳಗ

ಶುಕ್ರವಾರದ ಕಾರ್ಯಕ್ರಮಗಳು ಅತ್ಯಂತ ರೋಚಕವಾಗಿರಲಿವೆ:

ರಾಜ್ಯಮಟ್ಟದ ಮುಕ್ತ ಫೈಟ್: ಬೆಳಿಗ್ಗೆ 10ಕ್ಕೆ (ಪ್ರಥಮ ಬಹುಮಾನ ?10,001).

ತೇರಬಂಡಿ ಸ್ಪರ್ಧೆ (ಗಟ್ಟಿ ಮೈದಾನ): ಮಧ್ಯಾಹ್ನ 3 ಗಂಟೆಗೆ ಜರುಗುವ ಈ ಭಾರಿ ಸ್ಪರ್ಧೆಗೆ ಪ್ರಥಮ ಬಹುಮಾನವಾಗಿ ಬರೋಬ್ಬರಿ ?30,001, ದ್ವಿತೀಯ ?25,001, ತೃತೀಯ 20,001 ಸೇರಿದಂತೆ ಒಟ್ಟು 10 ಬಹುಮಾನಗಳನ್ನು ಘೋಷಿಸಲಾಗಿದೆ.

ಟಗರಿನ ಕಾಳಗ: ಸಾಯಂಕಾಲ ಹಳ್ಳದ ಟಗರಿನ ಕಾಳಗ ಹಾಗೂ ರಾತ್ರಿ



ಓಪನ್ ಟಗರಿನ ಕಾಳಗ ನಡೆಯಲಿದ್ದು, ಓಪನ್ ಸ್ಪರ್ಧೆಗೆ ಪ್ರಥಮ ಬಹುಮಾನ ?10,001 ಇದೆ.

ಮೇ 16 ರಂದು ಕ್ರಿಕೆಟ್ ಪಂದ್ಯಾವಳಿ

ಜಾತ್ರೆಯ ಕೊನೆಯ ಶನಿವಾರ ಬೆಳಿಗ್ಗೆ 10 ಗಂಟೆಯಿಂದ ಓಪನ್ ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಮೆಂಟ್ ಆಯೋಜಿಸಲಾಗಿದೆ. ಪ್ರಥಮ ಬಹುಮಾನ ?7001 ಹಾಗೂ ಆಕರ್ಷಕ ಟ್ರೋಫಿ ನೀಡಲಾಗುವುದು.

ಗ್ರಾಮದ ಗುರು-ಹಿರಿಯರು ಮತ್ತು ಸಕಲ ಸದ್ಭಕ್ತ ದೈವ ಮಂಡಳಿಯು ಈ ಎಲ್ಲಾ ಕಾರ್ಯಕ್ರಮಗಳಿಗೆ ಸುತ್ತಮುತ್ತಲಿನ ಹಳ್ಳಿಗಳ ಭಕ್ತಾದಿಗಳು ಮತ್ತು ಕ್ರೀಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜಾತ್ರಾ ಮಹೋತ್ಸವವನ್ನು ಯಶಸ್ವಿಗೊಳಿಸಬೇಕೆಂದು ಕೋರಿದ್ದಾರೆ.

## ವಿಜಯಪುರ ಜಿಲ್ಲೆಗೆ ಹೆಮ್ಮೆ: ಎಫ್.ಕೆ.ಸಿ.ಸಿ.ಐ. 'ಇನ್ನೋ ಮಂಥನ' ಸ್ಪರ್ಧೆಯ 2ನೇ ಸುತ್ತಿಗೆ ಪಟ್ಟಣದ ಹಡಲಗೇರಿ ಸರ್ಕಾರಿ ಕಾಲೇಜು



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ರಾಜ್ಯದ ಉನ್ನತ ಶಿಕ್ಷಣ ಇಲಾಖೆ ಹಾಗೂ ಎಫ್.ಕೆ.ಸಿ.ಸಿ.ಐ. ಸಂಸ್ಥೆಯು ಜಂಟಿಯಾಗಿ ಆಯೋಜಿಸಿದ್ದ 'ಇನ್ನೋ ಮಂಥನ-2026' ರಾಜ್ಯಮಟ್ಟದ ಬಿಜಿನೆಸ್ ಪ್ಲಾನ್ ಸ್ಪರ್ಧೆಯಲ್ಲಿ ಪಟ್ಟಣದ ಆಲಮಟ್ಟಿ ರಸ್ತೆಯ ಹಡಲಗೇರಿಯ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಎರಡನೇ ಸುತ್ತಿಗೆ ಆಯ್ಕೆಯಾಗುವ ಮೂಲಕ ಜಿಲ್ಲೆಯ ಏಕೈಕ ಕಾಲೇಜು ಎಂಬ ಕೀರ್ತಿಗೆ ಭಾಜನವಾಗಿದೆ.

ವಿದ್ಯಾರ್ಥಿಗಳಲ್ಲಿ ನವೋದ್ಯಮ ಹಾಗೂ ಸ್ಟಾರ್ಟ್-ಅಪ್ ಸಂಸ್ಕೃತಿಯನ್ನು ಬೆಳೆಸುವ ನಿಟ್ಟಿನಲ್ಲಿ ನಡೆದ ಈ ಸ್ಪರ್ಧೆಯಲ್ಲಿ ಕಾಲೇಜಿನ ವಿದ್ಯಾರ್ಥಿನಿಯರಾದ ಕು. ಸ್ವಾಲಿಹಾ ಮುಲ್ಕಿಸಿಪಾಯಿ, ಬಿಸ್ಮಿಲ್ಲಾಹ ತೆಗ್ಗಿ ಹಾಗೂ ಸಾನಿಯಾ ಜಾಲಿಹಾಳ ಅವರು ತಮ್ಮ ನೂತನ ಯೋಜನೆಯನ್ನು ಮಂಡಿಸಿ ಈ ಸಾಧನೆ ಮಾಡಿದ್ದಾರೆ.

ಕಾಲೇಜಿನ ಪ್ರಾಂಶುಪಾಲರಾದ ಡಾ. ಎಸ್.ಎಲ್. ಪಾಟೀಲ ಅವರು ಮಾರ್ಗದರ್ಶಕರಾಗಿ (ಮೆಂಟರ್) ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿದ್ದರು. ಪ್ಲೇಸ್ಮೆಂಟ್ ಕೋಶದ ಸಂಯೋಜಕಿ ಶ್ರೀಮತಿ ಲತಾಶ್ರೀ ಡಿ.ಪಿ. ಅವರು ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ್ದರು. ಜಿಲ್ಲೆಯ ಮಕುಟಕ್ಕೆ ಮತ್ತೊಂದು ಗರಿ ಇಟ್ಟ ವಿದ್ಯಾರ್ಥಿಗಳ ಸಾಧನೆಯನ್ನು ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಶ್ಲಾಘಿಸಿ, ಅಭಿನಂದನೆ ಸಲ್ಲಿಸಿದ್ದಾರೆ.

# ಅಕ್ರಮ ಗಣಿಗಾರಿಕೆಯ ವಿರುದ್ಧ ಸಿಡಿದ್ದೆದ್ದ ಗ್ರಾಮಸ್ಥರು



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲ್ಲೂಕಿನ ಆದರಹಳ್ಳಿ ಗ್ರಾಮದಲ್ಲಿ ಮೀಸಲು ಅರಣ್ಯ ಪ್ರದೇಶದಲ್ಲಿಯೇ ಅಕ್ರಮ ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿದ್ದರೂ ಗಣಿ ಮತ್ತು ಭೂವಿಜ್ಞಾನ ಇಲಾಖೆಯವರು ಅರಣ್ಯ ಇಲಾಖೆಯವರು ಪೊಲೀಸ್ ಇಲಾಖೆಯವರು ವಹಿಸಿರುವ ಮೌನಕ್ಕಾಗಿ ಇಡಿ ಗ್ರಾಮಕ್ಕೆ ಗ್ರಾಮವೇ ಸಂಕಷ್ಟದಲ್ಲಿದೆ ಈಗ ಇದುವರೆಗೂ ಹಿಡಿದಿಟ್ಟುಕೊಂಡಿದ್ದ ಸಹನೆಯ ಕಟ್ಟೆ ಒಡೆದು ಗ್ರಾಮಸ್ಥರು ಅಕ್ರಮ ಗಣಿಗಾರಿಕೆಯ ವಿರುದ್ಧ ಸಿಡಿದ್ದೆದ್ದು ಬಿದಿಗಿಳಿದು ಪ್ರತಿಭಟನೆ ಮಾಡುತ್ತಿದ್ದಾರೆ.

ಕ್ರಷರ್ ಮಾಲೀಕರು ಅಕ್ರಮವಾಗಿ ಬಂಡೆ ಗಲ್ಲುಗಳನ್ನು ಸ್ಫೋಟಿಸಲು ಸಿಡಿಮದ್ದುಗಳನ್ನು ಉಪಯೋಗಿಸುತ್ತಿರುವುದರಿಂದ ಗ್ರಾಮಗಳಲ್ಲಿನ ಮನೆಗಳಲ್ಲಿ ಗೋಡೆಗಳು ಬಿರುಕು ಬಿಟ್ಟು ಪರಿತಪ್ಪಿಸುತ್ತಿದ್ದರೆ ನೂರಾರು ಟಿಪ್ಪರಗಳು ಕ್ರಷರಗಳು ಓಡಾಡುತ್ತಿರುವುದರಿಂದ ಭಾರಿ ಪ್ರಮಾಣದ ಧೂಳು ಉಂಟಾಗಿ ಅನೇಕ ರೋಗರುಜಿನಗಳಿಗೆ ಜನರು ಬಲಿಯಾಗುತ್ತಿದ್ದರೆ ಇನ್ನೊಂದು ಕಡೆ ಭಾರಿ ಪ್ರಮಾಣದ ಮದ್ದು ಸಿಡಿಸುತ್ತಿರುವುದರಿಂದ ಕೊಳವೆ ಬಾವಿಗಳಲ್ಲಿನ ಜಲಾಶಯದ ಮಟ್ಟ ದಿನದಿಂದ ದಿನಕ್ಕೆ ಕುಸಿಯುತ್ತಿದ್ದು ಇಷ್ಟೆಲ್ಲಾ ಅನಾಹುತ ಆಗುತ್ತಿದ್ದರು ಅಧಿಕಾರಿಗಳ ಮೌನದ ವಿರುದ್ಧ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಅಕ್ರಮ ಗಣಿಗಾರಿಕೆಯಿಂದ ನಾವು ವಾಸಿಸುತ್ತಿರುವ ಗೋಡೆಗಳು ಬೀರುಕು ಬಿಟ್ಟಿವೆ ಹಾಗೂ ನಿರಂತರವಾಗಿ ಟಿಪ್ಪರ ಓಡಾಟದಿಂದ ಧೂಳಿನಿಂದ ನಮ್ಮ ಆರೋಗ್ಯದ ಮೇಲೆ ದುಷ್ಪರಿಣಾಮ ಬಿದ್ದು ಎಷ್ಟೋ ಜನರು ಆಸ್ಪತ್ರೆಗೆ ಸೇರಿದ್ದಾರೆ ಹಾಗೂ ಗಣಿಗಾರಿಕೆಯಿಂದ ಕುಡಿಯುವ ನೀರಿನ ಕೊಳವೆ ಬಾವಿಗಳು ಬತ್ತಿ ಹೋಗಿವೆ ಎಂದು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಸರಕಾರ ಮತ್ತು ಗಣಿ ಇಲಾಖೆಯವರು ಮಧ್ಯಪ್ರವೇಶಿಸಿ ಈ ಅಕ್ರಮ ಚಟುವಟಿಕೆಯನ್ನು ನಿಲ್ಲಿಸಬೇಕು ಜಿಲ್ಲಾಧಿಕಾರಿಗಳು ಖುದ್ದಾಗಿ ಪರಿಶೀಲಿಸಬೇಕು ಗಣಿಗಾರಿಕೆಗೆ ಬಳಸುವ ಸ್ಫೋಟಕಗಳಿಂದ ಮನೆಗಳಿಗೆ ಹಾನಿಯಾಗಿದ್ದ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕೆಂದು ಆಗ್ರಹಿಸಿದ್ದಾರೆ.

ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಪ್ರಭಾವಿ ಮುಖಂಡರಿಗೆ ಯಾವುದೇ ಮುಲಾಜಿಲ್ಲದೆ ಗಣಿಗಾರಿಕೆಗೆ ಕಣ್ಣುಮುಚ್ಚಿ ಆದೇಶ ನೀಡುತ್ತಿರುವುದರಿಂದ ಈ ಭಾಗದ ಗ್ರಾಮಸ್ಥರು ನಿತ್ಯ ವೇದನೆ ಅನುಭವಿಸುತ್ತಿದ್ದರೂ ಮೌನ ವಹಿಸಿರುವುದು ಮತ್ತು ಆದರಹಳ್ಳಿ ಗ್ರಾಮದ ಸುತ್ತಮುತ್ತಲಿರುವ ಕ್ರಷರ್ ಗಳು ಪ್ರಭಾವಿಗಳಿಗೆ ಸೇರಿರುವ ಸೇರಿರುವುದರಿಂದ ಅಧಿಕಾರಿಗಳು ಸಹ ಮೌನಕ್ಕೆ ಶರಣಾಗಿದ್ದಾರೆ ಎಂಬ ಸಾರ್ವತ್ರಿಕ ಟೀಕೆ ಕೇಳಿಬರುತ್ತಿದೆ.

ಕಿರಣ ಲಮಾಣಿ, ಉಮೇಶ ಲಮಾಣಿ ನರಸಪ್ಪ ಡಾಓ ಕೃಷ್ಣ ನಾಯಕ ರಮೇಶ ಲಮಾಣಿ ದೇವಪ್ಪ ಲಮಾಣಿ ಆನಂದ ಲಮಾಣಿ ಪ್ರಕಾಶ ಲಮಾಣಿ ಶೇಖಪ್ಪ ಲಮಾಣಿ ಶಂಕ್ರಪ್ಪ ಲಮಾಣಿ ಮಹಾಂತೇಶ ಲಮಾಣಿ ರವಿ ಲಮಾಣಿ ದುಂಡೇಪ್ಪ ಲಮಾಣಿ ಅಪ್ಪಣ್ಣ ಲಮಾಣಿ ಪ್ರಕಾಶ ಲಮಾಣಿ ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್ ವತಿಯಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ



**ಬೆಳಗಾವಿ ವಾರ್ತೆ ಗದಗ:** ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್ ವತಿಯಿಂದ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಗದಗ ಜಿಲ್ಲಾ ಗಾಣಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಲದೇ, 2025–26ನೇ ಸಾಲಿನಲ್ಲಿ ನಿವೃತ್ತರಾಗಿರುವ ಗದಗ ಜಿಲ್ಲಾ ಗಾಣಿಗ ಸಮಾಜದ ನಿವೃತ್ತ ಸರಕಾರಿ ನೌಕರರಿಗೆ ಸನ್ಮಾನಿಸಿ, ಗೌರವಿಸಲಾಗುತ್ತಿದೆ. ಆದ್ದರಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಹ ವಿದ್ಯಾರ್ಥಿಗಳು 01–06–2026ರೊಳಗಾಗಿ ಅಂಕ ಪಟ್ಟಿಯ ನಕಲು ಪತ್ರಿ ಹಾಗೂ ಪಾಸ್ ಪೋರ್ಟ್ ಸೈಜ್ ಫೋಟೊದೊಂದಿಗೆ ಮಾಹಿತಿ ನೀಡಲು ಸೂಚಿಸಿದೆ.

ಅರ್ಹ ವಿದ್ಯಾರ್ಥಿಗಳು ಹಾಗೂ ನಿವೃತ್ತ ನೌಕರರು ವಿವೇಕಾನಂದ ನಗರದ ಗಾಣಿಗ ಭವನ ಕಾರ್ಯಾಲಯ, ಕಾಟನ್ ಮಾರ್ಕೆಟ್ ರಸ್ತೆಯ ಲಕ್ಕುಂಡಿ ಸ್ಟೀಲ್ಸ್ ಹಾಗೂ ಎಪಿಎಂಸಿ ಯಾರ್ಡ್‌ನ ಎಂ.ಬಿ. ಬಡ್ನಿ & ಕಂ. ಹಾಗೂ ಮೊಬೈಲ್ ಸಂಖ್ಯೆ 94481–42509, 99450–37111, 77958–26957, 89705–92837 ಸಂಪರ್ಕಿಸಬಹುದು ಎಂದು ಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪರೂಪದ ಪ್ರಾಮಾಣಿಕತೆ: ಸಿಕ್ಕ ಚಿನ್ನದ ಆಭರಣ ಠಾಣೆಗೆ ಒಪ್ಪಿಸಿದ ಯುವಕರು

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಕಲಿಯುಗದಲ್ಲಿ ಮನುಷ್ಯತ್ವ ಮರೆಯಾಗುತ್ತಿದೆ ಎನ್ನುವವರ ನಡುವೆ, ಇಲ್ಲಿನ ಮೂವರು ಯುವಕರು ದಾರಿಯಲ್ಲಿ ಸಿಕ್ಕ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣವನ್ನು ಪೊಲೀಸ್ ಇಲಾಖೆಗೆ ಒಪ್ಪಿಸುವ ಮೂಲಕ ಪ್ರಾಮಾಣಿಕತೆ ಇಂದಿಗೂ ಜೀವಂತವಾಗಿದೆ ಎಂದು ತೋರಿಸಿಕೊಟ್ಟಿದ್ದಾರೆ.

ತಾಲೂಕಿನ ಮುದ್ದೇಬಿಹಾಳದಿಂದ ಹಿರೇಮುರಾಳಕ್ಕೆ ತೆರಳುವ ರಸ್ತೆಯಲ್ಲಿ ಮಾರ್ಗಮಧ್ಯೆ ಕಾರೊಂದರಿಂದ ಆಕಸ್ಮಿಕವಾಗಿ ಬಿದ್ದಿದ್ದ ಸುಮಾರು 30 ಗ್ರಾಂ ತೂಕದ ಚಿನ್ನದ ಆಭರಣಗಳು ಸ್ಥಳೀಯ ಯುವಕರಿಗೆ ಕಂಡುಬಂದಿವೆ. ಬೆಲೆಬಾಳುವ ಈ ಬಂಗಾರವನ್ನು ಕಂಡ ತಕ್ಷಣ ಕಿಂಚಿತ್ತೂ ಲೋಭ ತೋರದ ಯುವಕರು, ಕೂಡಲೇ ಅದನ್ನು ಸಾರ್ವಜನಿಕ ಆಸ್ತಿ ಎಂದು ಪರಿಗಣಿಸಿ ಕಾನೂನಿನ ಚೌಕಟ್ಟಿನಲ್ಲಿ ವಾರಸುದಾರರಿಗೆ ತಲುಪಿಸಲು ನಿರ್ಧರಿಸಿದರು.

ಯುವಕರಾದ ಅಣ್ಣಾಜಿ ರಾಠೋಡ್, ದೇವರಾಜ್ ಗಾಂಜಿ ಹಾಗೂ ಪರಶುರಾಮ್ ಚಲವಾದಿ ಅವರು ಸಿಕ್ಕ ಆಭರಣದೊಂದಿಗೆ ನೇರವಾಗಿ ಮುದ್ದೇಬಿಹಾಳ ಪೊಲೀಸ್ ಠಾಣೆಗೆ ಆಗಮಿಸಿದರು. ಅಲ್ಲಿನ ಕಾನೂನು ಸುವ್ಯವಸ್ಥೆ ವಿಭಾಗದ ಪಿಎಸ್‌ಐ ಸಂಜಯ ತಿಪ್ಪಾರಡ್ಡಿ ಹಾಗೂ ಕ್ರೈಂ ಪಿಎಸ್‌ಐ ಆರ್.ಎಸ್. ಬಂಗಿ ಅವರ ಬಳಿ ನಡೆದ ಘಟನೆಯನ್ನು ವಿವರಿಸಿ, ಚಿನ್ನವನ್ನು ಸುರಕ್ಷಿತವಾಗಿ ಹಸ್ತಾಂತರಿಸಿದರು.



ಯುವಕರ ಈ ಅಪ್ರತಿಮ ಪ್ರಾಮಾಣಿಕತೆಯನ್ನು ಕಂಡ ಪೊಲೀಸ್ ಅಧಿಕಾರಿಗಳು ಹರ್ಷ ವ್ಯಕ್ತಪಡಿಸಿ, ಅವರ ಸಮಾಜಮುಖಿ ಕಾರ್ಯವನ್ನು ಮುಕ್ತಕಂಠದಿಂದ ಶ್ಲಾಘಿಸಿದರು. **ಸಾರ್ವಜನಿಕ ಮೆಚ್ಚುಗೆ:** ಆಭರಣ ಕಳೆದುಕೊಂಡ ವ್ಯಕ್ತಿಗೆ ಆಸರೆಯಾದ ಈ ಯುವಕರ ನಿಸ್ವಾರ್ಥ ನಡೆಗೆ ತಾಲೂಕಿನಾದ್ಯಂತ ಸಾರ್ವಜನಿಕರು ಮೆಚ್ಚುಗೆಯ ಸುರಿಮಳೆಗರೆದಿದ್ದಾರೆ. ಇಂದಿನ ಯುವ ಪೀಳಿಗೆಗೆ ಇವರ ನಡೆ ಆದರ್ಶಪ್ರಾಯವಾಗಿದೆ ಎಂದು ಹಿರಿಯ ನಾಗರಿಕರು ಅಭಿಪ್ರಾಯಪಟ್ಟಿದ್ದಾರೆ.

# ರೇಶನ್ ಕಾರ್ಡ್ ತಿದ್ದುಪಡಿ ಹಾಗೂ ಸೇರ್ಪಡೆಗೆ ಅವಕಾಶ

ಗದಗ: ಬಿಪಿಎಲ್, ಎಪಿಎಲ್ ಹಾಗೂ ಅಂತ್ಯೋದಯ ಕಾರ್ಡ್ ಹೊಂದಿರುವ ಫಲಾನುಭವಿಗಳು ಪಡಿತರ ಚೀಟಿ ತಿದ್ದುಪಡಿ ಹಾಗೂ ಸೇರ್ಪಡೆಗೆ ಸರಕಾರ ಅವಕಾಶ ಕಲ್ಪಿಸಿದ್ದು, 31–03–2027ರೊಳಗಾಗಿ ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಕ್ಕೆ ಭೇಟಿ ನೀಡಬಹುದಾಗಿದೆ ಗದಗ ತಾಲೂಕ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸದಸ್ಯರ ಹೆಸರು ಸೇರ್ಪಡೆ–ತಿದ್ದುಪಡಿ, ಕುಟುಂಬ ಮುಖ್ಯಸ್ಥರ ಬದಲಾವಣೆ, ಸದಸ್ಯರ ಫೋಟೋ ಅಪ್‌ಡೇಟ್, ವಿಳಾಸ ಬದಲಾವಣೆ, ರೇಷನ್ ಅಂಗಡಿ ಬದಲಾವಣೆ ಹಾಗೂ ಹೆಸರು ಡಿಲೀಟ್ ಮಾಡಲು ಬಯಸುವ ಅರ್ಹ ಫಲಾನುಭವಿಗಳಿಗೆ ತಿದ್ದುಪಡಿ ಹಾಗೂ ಸೇರ್ಪಡೆಗೆ ಅವಕಾಶ ಕಲ್ಪಿಸಲಾಗಿದೆ.

ಮದುವೆಯಾದ ಹೆಣ್ಣು ಮಕ್ಕಳನ್ನು ಮತ್ತು ಮರಣ ಹೊಂದಿದ ಸದಸ್ಯರನ್ನು ಮಾತ್ರ ರೇಷನ್ ಕಾರ್ಡಿನಿಂದ ಡಿಲೀಟ್ ಮಾಡಲಾಗುವುದು ಗದಗ ತಾಲೂಕ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 11ರಿಂದ 'ಆಲ್ಕೋಹಾಲ್ ಇನ್ ಬೇವರೇಜ್' ತೆರಿಗೆ ಜಾರಿ: ಮದ್ಯದ ದರಗಳಲ್ಲಿ ಭಾರೀ ಬದಲಾವಣೆ..!



**ಬೆಳಗಾವಿ ವಾರ್ತೆ ಬೆಂಗಳೂರು:** ರಾಜ್ಯ ಸರ್ಕಾರವು ಮದ್ಯದ ಮೇಲಿನ ತೆರಿಗೆ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ತಂದು, "ಆಲ್ಕೋಹಾಲ್ ಇನ್ ಬೇವರೇಜ್" (AIB) ಆಧಾರಿತ ಹೊಸ ಅಬಕಾರಿ ನೀತಿಯನ್ನು ಜಾರಿಗೆ ತರಲು ಅಂತಿಮ ಅಧಿಸೂಚನೆ ಹೊರಡಿಸಿದೆ. ಈ ಹೊಸ ನೀತಿ ಮೇ 11ರಿಂದ ರಾಜ್ಯಾದ್ಯಂತ ಜಾರಿಗೆ ಬರಲಿದೆ.

ಈ ಮೂಲಕ ಕಳೆದ 6 ದಶಕಗಳಿಂದ ಜಾರಿಯಲ್ಲಿದ್ದ "ಬಲ್ಕ್ ಲೀಟರ್" ಆಧಾರಿತ ತೆರಿಗೆ ವ್ಯವಸ್ಥೆಗೆ ತೆರೆ ಬೀಳಲಿದೆ. ಕರ್ನಾಟಕವು ದೇಶದಲ್ಲೇ ಮೊದಲ ಬಾರಿಗೆ AIB ಆಧಾರಿತ ತೆರಿಗೆ ನೀತಿಯನ್ನು ಅನುಷ್ಠಾನಗೊಳಿಸುತ್ತಿರುವ ರಾಜ್ಯವಾಗಿದೆ.

ಸರ್ಕಾರವು ಏಪ್ರಿಲ್ 18ರಂದು ಕರಡು ಅಧಿಸೂಚನೆ ಹೊರಡಿಸಿ ಸಾರ್ವಜನಿಕರಿಂದ ಆಕ್ಷೇಪಣೆ ಹಾಗೂ ಸಲಹೆಗಳನ್ನು ಆಹ್ವಾನಿಸಿತ್ತು. ಬಂದ ಅಭಿಪ್ರಾಯಗಳನ್ನು ಪರಿಗಣಿಸಿದ ಬಳಿಕ ಕರ್ನಾಟಕ ಅಬಕಾರಿ (ಅಬಕಾರಿ ಸುಂಕ ಮತ್ತು ಶುಲ್ಕ) (2ನೇ ತಿದ್ದುಪಡಿ) ನಿಯಮಗಳು, 2026 ಅನ್ನು ಅಂತಿಮಗೊಳಿಸಲಾಗಿದೆ.

ಹೊಸ ನೀತಿಯ ಪ್ರಕಾರ, ಬ್ರಾಂಡಿ, ವಿಸ್ಕಿ, ರಮ್, ಜಿನ್, ಬಿಯರ್, ವೈನ್ ಸೇರಿದಂತೆ ವಿವಿಧ ಮದ್ಯಗಳಲ್ಲಿ ಇರುವ "ಆಲ್ಕೋಹಾಲ್ ಪ್ರಮಾಣ" ಆಧರಿಸಿ ತೆರಿಗೆ ವಿಧಿಸಲಾಗುತ್ತದೆ. ಇದರಿಂದ ಈಗಿರುವ 16 ಅಬಕಾರಿ ಸ್ಲ್ಯಾಬ್‌ಗಳನ್ನು ಕಡಿತಗೊಳಿಸಿ ಕೇವಲ 8 ಸ್ಲ್ಯಾಬ್‌ಗಳಿಗೆ ಸೀಮಿತಗೊಳಿಸಲಾಗಿದೆ.

ಅಬಕಾರಿ ಇಲಾಖೆಯ ಆದಾಯದಲ್ಲಿ ಪ್ರಮುಖ ಪಾತ್ರವಹಿಸುವ ಕಡಿಮೆ ದರದ ಮದ್ಯ ವಿಭಾಗದ ಮೇಲೆ ಈ ನೀತಿಯ ಪರಿಣಾಮ ಹೆಚ್ಚು ಕಾಣಿಸಿಕೊಳ್ಳಲಿದೆ ಎಂದು ಉದ್ಯಮ ಮೂಲಗಳು ತಿಳಿಸಿವೆ.

ವಿಶೇಷವಾಗಿ ಹೆಚ್ಚು ಮಾರಾಟವಾಗುವ 180 ಮಿಲಿ ಟೆಟ್ರಾ ಪ್ಯಾಕ್‌ಗಳ ವಿಸ್ಕಿ, ರಮ್, ಬ್ರಾಂಡಿ, ಜಿನ್ ಹಾಗೂ ವೋಡ್ಕಾ ಬೆಲೆ ಕನಿಷ್ಠ 20% ಹೆಚ್ಚಾಗುವ ಸಾಧ್ಯತೆ ಇದೆ ಎನ್ನಲಾಗಿದೆ.

ಇದೇ ವೇಳೆ ಪ್ರೀಮಿಯಂ ಮದ್ಯ ಬ್ರ್ಯಾಂಡ್‌ಗಳ ಬೆಲೆ ಶೇ.16 ರಿಂದ ಶೇ.20ವರೆಗೆ ಇಳಿಕೆಯಾಗುವ ಸಾಧ್ಯತೆ ಇದೆ. ಇದರಿಂದ ಬಹುರಾಷ್ಟ್ರೀಯ ಪ್ರೀಮಿಯಂ ಬ್ರ್ಯಾಂಡ್‌ಗಳಿಗೆ ಲಾಭವಾಗಬಹುದು, ಆದರೆ, ಸ್ಥಳೀಯ ಡಿಸ್ಟಿಲರಿಗಳು ಮತ್ತು ಪ್ರಾದೇಶಿಕ ಉತ್ಪಾದಕರಿಗೆ ಹಿನ್ನಡೆ ಉಂಟಾಗಬಹುದು ಎಂದು ಉದ್ಯಮ ವಲಯ ಆತಂಕ ವ್ಯಕ್ತಪಡಿಸಿದೆ.

ಕಡಿಮೆ ಬೆಲೆಯ ಭಾರತೀಯ ಮದ್ಯ ಉತ್ಪಾದಕರಿಗೆ ಈ ಹೊಸ ವ್ಯವಸ್ಥೆ ಹೊರೆ ಆಗಬಹುದು. ಸ್ಥಳೀಯ ಹೂಡಿಕೆ ಮತ್ತು ಉದ್ಯೋಗಾವಕಾಶಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಇನ್ನೊಂದೆಡೆ, ಇಂಡಿಯನ್ ಸ್ಪಿರಿಟ್ಸ್ ಆ್ಯಂಡ್ ವೈನ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ISWAI) ಈ ನೀತಿಯನ್ನು ಸ್ವಾಗತಿಸಿದೆ.

ಸಂಸ್ಥೆಯ ಸಿಇಒ ಸಂಜಿತ್ ಪಾಧಿ ಮಾತನಾಡಿ, ಇದು ಅಬಕಾರಿ ವ್ಯವಸ್ಥೆಯನ್ನು ಆಧುನೀಕರಿಸುವ ಹಾಗೂ ಸರಳಗೊಳಿಸುವ ಮುನ್ನೋಟದ ಹೆಜ್ಜೆಯಾಗಿದೆ. ಈ ಮೂಲಕ ಪ್ರೀಮಿಯಂ ಉತ್ಪನ್ನಗಳ ಬೆಳವಣಿಗೆಗೆ ಉತ್ತೇಜನ ಸಿಗಲಿದೆ ಎಂದು ಹೇಳಿದ್ದಾರೆ.

"Drink Better, Not More" ಎಂಬ ತತ್ವಕ್ಕೆ ಈ ನೀತಿ ಹೊಂದಿಕೆಯಾಗಿದ್ದು, ಗುಣಮಟ್ಟದ ಮದ್ಯ ಸೇವನೆಗೆ ಉತ್ತೇಜನ ನೀಡಲಿದೆ ಎಂದು ತಿಳಿಸಿದ್ದಾರೆ.

# ಸಚಿವ ಸುಧಾಕರ್ ನಿಧನ: ಚಿತ್ರದುರ್ಗ ಜಿಲ್ಲೆಗೆ ಸರ್ಕಾರಿ ರಜೆ ಘೋಷಣೆ; 3 ದಿನ ರಾಜ್ಯಾದ್ಯಂತ ಸಂತಾಪ– ಸರ್ಕಾರ ಆದೇಶ



**ಬೆಳಗಾವಿ ವಾರ್ತೆ ಬೆಂಗಳೂರು:** ಸಚಿವ ಡಿ ಸುಧಾಕರ್ ನಿಧನಕ್ಕೆ ರಾಜ್ಯ ಸರ್ಕಾರ ತೀವ್ರ ಸಂತಾಪ ಸೂಚಿಸಿದ್ದು, ಚಿತ್ರದುರ್ಗಕ್ಕೆ ಅನ್ವಯವಾಗುವಂತೆ ಸೋಮವಾರ (ಮೇ 11) ಸರ್ಕಾರಿ ರಜೆ ಘೋಷಣೆ ಮಾಡಿದೆ. ಜೊತೆಗೆ 3 ದಿನ ರಾಜ್ಯಾದ್ಯಂತ ಶೋಕಾಚರಣೆಯನ್ನೂ ಘೋಷಿಸಿದೆ.

ಅನಾರೋಗ್ಯದಿಂದ ಬಳಲುತ್ತಿದ್ದ ಹಿರಿಯೂರು ಶಾಸಕರು ಹಾಗೂ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಡಿ ಸುಧಾಕರ್ ಅವರು ಮೇ 10 ಬೆಳಗಿನ ಜಾವ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಮೃತಪಟ್ಟರು. ಈ ಹಿನ್ನೆಲೆ ಸರ್ಕಾರ ಸಂತಾಪ ಸೂಚಿಸಿ ಅಧಿಸೂಚನೆ ಹೊರಡಿಸಿದೆ. ಮೃತರ ಗೌರವಾರ್ಥ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲು ಸರ್ಕಾರ ಆದೇಶಿಸಿದೆ.

ಸರ್ಕಾರದ ಆದೇಶದಂತೆ ಮೇ 11 ರಂದು ಸೋಮವಾರ, ಚಿತ್ರದುರ್ಗ ಜಿಲ್ಲೆಯ ಸಾರ್ವಜನಿಕ ಸರ್ಕಾರಿ ಕಚೇರಿಗಳಿಗೆ ಮತ್ತು ಎಲ್ಲಾ ಶಾಲಾ ಕಾಲೇಜುಗಳಿಗೆ (ಅನುದಾನ ಪಡೆಯುವ ಎಲ್ಲಾ ವಿದ್ಯಾ ಸಂಸ್ಥೆಗಳಿಗೂ ಸೇರಿದಂತೆ) ಸರ್ಕಾರಿ ಸ್ವಾಮ್ಯದ ಅಂಗ ಸಂಸ್ಥೆಗಳು ಒಳಗೊಂಡಂತೆ ಸಾರ್ವಜನಿಕ ರಜೆ ಘೋಷಿಸಲಾಗಿದೆ.

ಮೇ 10 ರಿಂದ 12 ರವರೆಗೆ ಮೂರು ದಿನಗಳು ರಾಜ್ಯಾದ್ಯಂತ ಶೋಕವನ್ನು ಆಚರಿಸಲಾಗುತ್ತಿದ್ದು, ಈ ಅವಧಿಯಲ್ಲಿ ಯಾವುದೇ ಸಾರ್ವಜನಿಕ ಮನರಂಜನಾ ಕಾರ್ಯಕ್ರಮಗಳು ಇರುವುದಿಲ್ಲ. ನಿಯಮಿತವಾಗಿ ಹಾರಿಸಲ್ಪಡುವ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧ ಮಟ್ಟದಲ್ಲಿ ಹಾರಿಸಲಾಗುತ್ತದೆ.

**ಇಂದು ಸಂಜೆ ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ**

ಈ ನಡುವೆ ಸದಾಶಿವ ನಗರದ ನಿವಾಸದಲ್ಲಿ ಸಚಿವ ಡಿ.ಸುಧಾಕರ್ ಅವರ ಅಂತಿಮ ದರ್ಶನ ಪಡೆದ ಬಳಿಕ ಮಾತನಾಡಿದ ಮುಖ್ಯಮಂತ್ರಿಗಳು, ಇಂದು ಚಳ್ಳಕೆರೆಯಲ್ಲಿ ಸಂಜೆ 4.00 ಗಂಟೆಗೆ ಸಕಲ ಸರ್ಕಾರಿ ಗೌರವದೊಂದಿಗೆ ಅವರ ಅಂತ್ಯಕ್ರಿಯೆ ನಡೆಯಲಿದ್ದು, ನಾನು ಸಹ ಭಾಗಿಯಾಗುತ್ತೇನೆಂದ ಹೇಳಿದ್ದಾರೆ.

ಸಚಿವ ಸುಧಾಕರ್ ಅವರ ಅಗಲಿಕೆಯಿಂದ ರಾಜಕೀಯ ಕ್ಷೇತ್ರಕ್ಕೆ ಬಹುದೊಡ್ಡ ನಷ್ಟವುಂಟಾಗಿದೆ. ರಾಜ್ಯದಲ್ಲಿ ಮೂರು ದಿನಗಳ ಕಾಲ ಶೋಕಾಚರಣೆ ಮಾಡುತ್ತಿದ್ದು, ಚಿತ್ರದುರ್ಗದಲ್ಲಿ ಸೋಮವಾರ ರಜೆ ಘೋಷಣೆ ಮಾಡಲಾಗಿದೆ ಎಂದು ಹೇಳಿದ್ದಾರೆ.

ಸುಧಾಕರ್ ಅವರು ಮೂಲತಃ ಚಳ್ಳಕರೆಯವರು. 2008ರಿಂದ ಹಿರಿಯೂರು ಶಾಸಕರಾಗಿದ್ದರು. ಎರಡನೇ ಬಾರಿಗೆ ಮಂತ್ರಿಯಾಗಿದ್ದ ಅವರು ಅತ್ಯಂತ ಜನಪ್ರಿಯ ವ್ಯಕ್ತಿ. ಸಮಾಜ ಕಲ್ಯಾಣ ಸಚಿವರಾಗಿಯೂ ಕೆಲಸ ಮಾಡಿದ್ದಾರೆ. ಸಹಕಾರ ಕ್ಷೇತ್ರದಲ್ಲಿಯೂ ಸಾಕಷ್ಟು ಕೊಡುಗೆ ನೀಡಿರುವ ಅವರು, ಡಿಸಿಸಿ ಬ್ಯಾಂಕ್ ಅಧ್ಯಕ್ಷರೂ ಆಗಿದ್ದರು. ಅಪೆಕ್ಸ್ ಬ್ಯಾಂಕ್ ನಿರ್ದೇಶಕರಾಗಿಯೂ ಕಾರ್ಯನಿರ್ವಹಿಸಿದ್ದರು. ಸುಧಾಕರ್ ಅವರ ಚಿಕ್ಕಪ್ಪ ಜಯಣ್ಣ ಕೂಡಾ ಶಾಸಕರಾಗಿದ್ದವರು. ರಾಜಕೀಯ ಕ್ಷೇತ್ರದಲ್ಲಿ ಅಪಾರ ಜನಪ್ರಿಯತೆ ಗಳಿಸಿಕೊಂಡಿದ್ದರು. ಚಳ್ಳಕೆರೆ ಎಸ್.ಟಿ ಮೀಸಲು ಕ್ಷೇತ್ರವಾಗಿದ್ದರಿಂದ ಹಿರಿಯೂರಿನಿಂದ ಸ್ಪರ್ಧಿಸಿ ಗೆದ್ದಿದ್ದರು, ರೈತರ ಹಾಗೂ ಬಡವರ ಪರವಾಗಿ ಸಾಕಷ್ಟು ಕೆಲಸ ಮಾಡಿದ್ದು, ಬಡವರ ಬಂಧು ಎಂದೇ ಖ್ಯಾತರಾಗಿದ್ದರು.

ಸುಧಾಕರ್ ಅವರು ಪತ್ನಿ, ಪುತ್ರಿ ಹಾಗೂ ಪುತ್ರ ಸೇರಿದಂತೆ ಅಪಾರ ಬಂಧುಬಳಗ, ಅಭಿಮಾನಿಗಳನ್ನು ಅಗಲಿದ್ದಾರೆ. ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಹಾಗೂ ಕುಟುಂಬದವರಿಗೆ ಅವರ ಸಾವಿನ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಪ್ರಾರ್ಥಿಸುತ್ತೇನೆಂದು ತಿಳಿಸಿದ್ದಾರೆ.

# "ಅಮ್ಮನ ಅನಾರೋಗ್ಯ" ಕಾರಣ ನೀಡಿ ಬಾಲ್ಯವಿವಾಹಕ್ಕೆ ಒತ್ತಾಯ: ಮಕ್ಕಳ ಕಲ್ಯಾಣ ಇಲಾಖೆಗೆ ಸುಳಿವು ಕೊಟ್ಟ Boyfriend, ಕೊನೆ ಕ್ಷಣದಲ್ಲಿ ಮದುವೆ ರದ್ದು..!

**ಬೆಳಗಾವಿ ವಾರ್ತೆ ಬೆಂಗಳೂರು:** 16 ವರ್ಷದ ಅಪ್ರಾಪ್ತ ಬಾಲಕಿಯ ಮದುವೆಯನ್ನು ಆಕೆಯ ಬಾಯ್ ಫ್ರೆಂಡ್ ನೀಡಿದ ಮಾಹಿತಿ ಆಧರಿಸಿ ಮಕ್ಕಳ ರಕ್ಷಣಾ ಇಲಾಖೆ ತಡೆದಿರುವ ಘಟನೆಯೊಂದು ನಗರದಲ್ಲಿ ನಡೆದಿದೆ.

ಚಂದ್ರಾಲೇಔಟ್ ಪೊಲೀಸ್ ಠಾಣೆ ವ್ಯಾಪ್ತಿಯ ಪೂರ್ಣಿಮಾ ಮಹಲ್‌ನಲ್ಲಿ ಮೇ 11ರಂದು 33 ವರ್ಷದ ವ್ಯಕ್ತಿಯೊಂದಿಗೆ ಬಾಲಕಿಯ ವಿವಾಹ ನಿಗದಿಯಾಗಿತ್ತು.

ಬಾಲಕಿಯ ತಾಯಿ ಮೂತ್ರಪಿಂಡ ವೈಫಲ್ಯದಿಂದ ಬಳಲುತ್ತಿದ್ದು ಡಯಾಲಿಸಿಸ್ ಪಡೆಯುತ್ತಿರುವ ಹಿನ್ನೆಲೆ, ಕುಟುಂಬದವರು ಭಾವನಾತ್ಮಕ ಒತ್ತಡ ಹಾಕಿ ಮದುವೆಗೆ ಒಪ್ಪಿಸುವ ಪ್ರಯತ್ನ ಮಾಡಿದ್ದರು ಎನ್ನಲಾಗಿದೆ.

ಈ ವಿಚಾರವನ್ನು ಬಾಲಕಿ ತನ್ನ ಬಾಯ್ ಫ್ರೆಂಡ್ ಬಳಿ ಹೇಳಿಕೊಂಡಿದ್ದು, ಬಳಿಕ ಆತ ಕನ್ನಡಪರ ಸಂಘಟನೆಯೊಂದರ ಮೂಲಕ ಮಕ್ಕಳ ರಕ್ಷಣಾ ಇಲಾಖೆಗೆ ಮಾಹಿತಿ ರವಾನಿಸಿದ್ದಾನೆ.

ಮಾಹಿತಿ ತಿಳಿದ ತಕ್ಷಣ ಮೇ 7ರಂದು ಅಧಿಕಾರಿಗಳು ನಾಗರಭಾವಿಯಲ್ಲಿರುವ ಬಾಲಕಿಯ ಮನೆಗೆ ಭೇಟಿ ನೀಡಿ, ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಅದರ ಕಾನೂನು ಪರಿಣಾಮಗಳ ಬಗ್ಗೆ ಕುಟುಂಬಕ್ಕೆ ಜಾಗೃತಿ ಮೂಡಿಸಿದ್ದಾರೆ.

ಮಕ್ಕಳ ಕಲ್ಯಾಣ ಇಲಾಖೆ ಮಧ್ಯಪ್ರವೇಶಿಸದಿದ್ದರೆ ಮದುವೆ ನಡೆಯುತ್ತಿತ್ತು ಎಂದು ಕೆಂಗೇರಿ ವಿಭಾಗದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಆಶಾ ಹೆಚ್.ಕೆ ಅವರು ತಿಳಿಸಿದ್ದಾರೆ.

ಬಾಲ್ಯವಿವಾಹದಿಂದ ಆರೋಗ್ಯ ಸಮಸ್ಯೆಗಳು ಉಂಟಾಗಬಹುದು. ಜೊತೆಗೆ ವಯಸ್ಸಿನ ಅಂತರದಿಂದ ದಾಂಪತ್ಯ ಜೀವನದಲ್ಲಿ ಮಾನಸಿಕ ಅಸಮಾಧಾನ ಉಂಟಾಗುವ ಸಾಧ್ಯತೆ ಇದೆ ಎಂಬುದನ್ನೂ ಕುಟುಂಬಕ್ಕೆ ವಿವರಿಸಿದ್ದೇವೆ ಎಂದು ಆಶಾ ಅವರು ಹೇಳಿದ್ದಾರೆ.

ಮದುವೆ ಮಂಟಪ ಬುಕ್ಕಿಂಗ್ ಸೇರಿದಂತೆ ಎಲ್ಲಾ ಸಿದ್ಧತೆಗಳು ಆಗಿದ್ದರಿಂದ ಬಾಲಕಿಯ ತಾಯಿ ಭಾವನಾತ್ಮಕವಾಗಿ ಕುಗ್ಗಿದರು. ಬಾಲಕಿಯನ್ನು ಕಸ್ಟಡಿಗೆ ತೆಗೆದುಕೊಳ್ಳುವ ಬಗ್ಗೆ ಅಧಿಕಾರಿಗಳು ತಿಳಿಸಿದಾಗ ಮಹಿಳೆ ಆತ್ಮಹತ್ಯೆ ಬೆದರಿಕೆ ಹಾಕಿದರು.

ನಂತರ ಬಾಲಕಿಯ ತಂದೆ ಲೋಕೇಶ್ ಆರ್ ಅವರಿಂದ, ಮದುವೆ ರದ್ದುಪಡಿಸಿ ಬಾಲಕಿ ಕಾನೂನುಬದ್ಧ ವಯಸ್ಸಿಗೆ ಬಂದ ನಂತರ ಮಾತ್ರ ವಿವಾಹ ಮಾಡುವುದಾಗಿ ಪತ್ರ ಬರೆಯಿಸಿಕೊಳ್ಳಲಾಯಿತು. ಕುಟುಂಬವು ಮುಂದಿನ ವಾರ ಮಕ್ಕಳ ಕಲ್ಯಾಣ ಸಮಿತಿ (CWC) ಮುಂದೆ ಹಾಜರಾಗಬೇಕಿದೆ ಎಂದು ತಿಳಿಸಿದ್ದಾರೆ.



ಬಾಲಕಿಯ ಸುರಕ್ಷತೆ ದೃಷ್ಟಿಯಿಂದ ಸ್ಥಳೀಯ ಪೊಲೀಸರು ಪ್ರತಿದಿನ ಮನೆಗೆ ಭೇಟಿ ನೀಡಲಿದ್ದಾರೆ ಎಂದು ಇಲಾಖೆ ತಿಳಿಸಿದೆ.

ಇದೇ ವೇಳೆ ಬಾಲ್ಯವಿವಾಹದ ಮಾಹಿತಿ ನೀಡಿದ ಕೆಲವು ಕಾರ್ಯಕರ್ತರಿಗೆ ಬೆದರಿಕೆ ಕರೆಗಳು ಬರುತ್ತಿರುವುದಾಗಿ ತಿಳಿದುಬಂದಿದ್ದು, ಈ ಕುರಿತು ಪೊಲೀಸ್ ದೂರು ನೀಡುವಂತೆ ಅಧಿಕಾರಿಗಳು ಸಲಹೆ ನೀಡಿದ್ದಾರೆ.

# ಉಚಿತ ವಿದ್ಯುತ್ ಯೋಜನೆಗೆ ಸಿಎಂ ವಿಜಯ್ ಮೊದಲ ಸಹಿ



**ಬೆಳಗಾವಿ ವಾರ್ತೆ ಚೆನ್ನೈ:** ತಮಿಳುನಾಡಿನ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ, ನಟ ಜೋಸೆಫ್ ವಿಜಯ್, ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿದ ಎಲ್ಲಾ ಅಂಶಗಳನ್ನು ಈಡೇರುಸುವ ಭರವಸೆ ನೀಡಿದ್ದಾರೆ.

ಮೊದಲ ಭಾಷಣದಲ್ಲಿಯೇ 'ತಮಿಳುನಾಡಿನಲ್ಲಿ ಹೊಸ ಯುಗದ ಆರಂಭ ಇದಾಗಿದೆ. ನಿಜವಾದ, ಜಾತ್ಯತೀತ ಹಾಗೂ ಸಾಮಾಜಿಕ ನ್ಯಾಯದ ಹೊಸ ಯುಗಾರಂಭವಾಗಿದೆ' ಎಂದಿದ್ದಾರೆ. ಅಲ್ಲದೇ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳುತ್ತಿದ್ದಂತೆಯೇ ಅವರು, 200 ಯುನಿಟ್ ಉಚಿತ ವಿದ್ಯುತ್ ನೀಡುವ ಯೋಜನೆಗೆ ಸಹಿ ಹಾಕಿದ್ದಾರೆ.

ನಾನು ಯಾವುದೇ ರಾಜ ಮನೆತನದಿಂದ ಬಂದವನಲ್ಲ, ಜನರೇ ನನ್ನನ್ನು ಆರಿಸಿ ಕಳಿಸಿದ್ದಾರೆ. ಜನರಿಗೆ ನೀಡಿದ ಎಲ್ಲ ಭರವಸೆಗಳನ್ನು ಪ್ರಾಮಾಣಿಕವಾಗಿ ಈಡೇರಿಸಲು ಪ್ರಯತ್ನಿಸುತ್ತೇನೆ. ಸುಳ್ಳು ಭರವಸೆ ನೀಡಿ ಮೋಸ ಮಾಡುವುದಿಲ್ಲ ಎಂದರು.

ಇದು ನನ್ನೊಬ್ಬನ ಗೆಲುವು ಅಲ್ಲ, ನಿಮ್ಮೆಲ್ಲರ ಗೆಲುವು. ಇಡೀ ತಮಿಳುನಾಡಿನ ಜನರ ಗೆಲುವು. ನಿಮ್ಮೆಲ್ಲರಿಂದಲೇ ನಾನು ಇಂದು ರಾಜ್ಯದ ಮುಖ್ಯಮಂತ್ರಿಯಾಗಿದ್ದೇನೆ. ಸಮಸ್ತ ನಾಡಿನ ಜನತೆಗೆ ಕೋಟಿ ಕೋಟಿ ನಮನಗಳು ಎಂದರು.

**ಆರ್ಥಿಕ ದುಸ್ಥಿತಿ:** ಹಿಂದಿನ ಎಂ.ಕೆ.ಸ್ಟಾಲಿನ್ ನೇತೃತ್ವದ ಡಿಎಂಕೆ ಸರ್ಕಾರ ಖಜಾನೆಯನ್ನು ಖಾಲಿ ಮಾಡಿದೆ. 10 ಲಕ್ಷ ಕೋಟಿ ಸಾಲದ ಹೊರೆಯನ್ನು ಹೊರೆಸಿದ್ದಾರೆ ಎಂದ ಅವರು, ರಾಜ್ಯ ಆರ್ಥಿಕವಾಗಿ ದುಸ್ಥಿತಿಯಲ್ಲಿದೆ. ರಾಜ್ಯದ ಹಣಕಾಸಿನ ಕುರಿತಾಗಿ ಶ್ವೇತಪತ್ರ ಬಿಡುಗಡೆ ಮಾಡುವುದಾಗಿ ತಿಳಿಸಿದರು.

# 29 ವರ್ಷಕ್ಕೆ ಸಚಿವ ಪಟ್ಟ ಅಲಂಕರಿಸಿದ ಕೀರ್ತನಾ



**ಬೆಳಗಾವಿ ವಾರ್ತೆ ಚೆನ್ನೈ:** ನಟ ಹಾಗೂ ಟಿವಿಕೆ ಪಕ್ಷದ ನಾಯಕ ವಿಜಯ್ ನೇತೃತ್ವದ ಹೊಸ ತಮಿಳುನಾಡು ಸರ್ಕಾರದಲ್ಲಿ ಏಕೈಕ ಮಹಿಳಾ ಸಚಿವೆಯಾಗಿರುವ ಎಸ್. ಕೀರ್ತನಾ ಗಮನ ಸೆಳೆದಿದ್ದಾರೆ. ಹಿಂದಿಯನ್ನು ಸುಲಲಿತವಾಗಿ ಮಾತನಾಡುವ ಕೀರ್ತನಾ, ಸಚಿವ ಸಂಪುಟ ಸೇರ್ಪಡೆಯಾದ ಬಳಿಕ ಹೊಸ ಸರ್ಕಾರ ಆಡಳಿತದಲ್ಲಿ ಮಾದರಿ ನಿರ್ಮಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಚೆನ್ನೈನ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಇಂದು ನಡೆದ ಪ್ರಮಾಣವಚನ ಸಮಾರಂಭದಲ್ಲಿ ಮುಖ್ಯಮಂತ್ರಿ ವಿಜಯ್ ಜೊತೆಗೆ ಎಸ್. ಕೀರ್ತನಾ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದರು. ಅವರೊಂದಿಗೆ ಎನ್ ಆನಂದ್, ಆಧವ್ ಅರ್ಜುನಾ, ಕೆಎ ಸೇಂಗೊಟ್ಟಯ್ಯನ್, ಪಿ ವೆಂಕಟರಮಣನ್, ಆರ್ ನಿಲ ಕುಮಾರ್, ರಾಜ್ಮೋಹನ್, ಟಿಕೆ ಪ್ರಭು ಹಾಗೂ ಕೆಜಿ ಅನುರಾಜ್ ಸಚಿವರಾಗಿ ಅಧಿಕಾರ ಸ್ವೀಕರಿಸಿದರು.

ಪ್ರಮಾಣವಚನದ ಬಳಿಕ ಮಾತನಾಡಿದ ಕೀರ್ತನಾ, "ಇಂತಹ ಅವಕಾಶವನ್ನು ಬೇರೆ ಯಾವ ರಾಜ್ಯದಲ್ಲೂ ನೀಡುವುದಿಲ್ಲ. ನಾವು ಸರ್ಕಾರವನ್ನು ಎಷ್ಟು ಉತ್ತಮವಾಗಿ ನಡೆಸಬಹುದು ಎಂಬುದನ್ನು ಜಗತ್ತಿಗೆ ತೋರಿಸುತ್ತೇವೆ," ಎಂದು ಹೇಳಿದ್ದಾರೆ.

ಶಿವಕಾಶಿ ಕ್ಷೇತ್ರದಿಂದ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾಗಿರುವ ಕೀರ್ತನಾ, ಕೇವಲ 29 ವರ್ಷದವರಾಗಿದ್ದು ಸಚಿವ ಸಂಪುಟದ ಅತ್ಯಂತ ಕಿರಿಯ ಸದಸ್ಯೆಯಾಗಿದ್ದಾರೆ. ಸ್ನಾತಕೋತ್ತರ ಪದವೀಧರರಾಗಿರುವ ಅವರು ಇತ್ತೀಚಿನ ವಿಧಾನಸಭೆ ಚುನಾವಣೆಯಲ್ಲಿ 11,697 ಮತಗಳ ಅಂತರದಿಂದ ಜಯಗಳಿಸಿದ್ದರು. ಪಟಾಕಿ ನಗರ' ಎಂದೇ ಖ್ಯಾತಿ ಪಡೆದ ಶಿವಕಾಶಿ ಕ್ಷೇತ್ರದಲ್ಲಿ ಮೊದಲ ಮಹಿಳಾ ಶಾಸಕರಾಗಿರುವ ಕೀರ್ತನಾ, ಸುಮಾರು ಏಳು ದಶಕಗಳ ಪುರುಷ ಪ್ರಾಬಲ್ಯಕ್ಕೆ ತೆರೆ ಎಳೆದಿದ್ದಾರೆ. ವಿಜಯ್ ಸಚಿವ ಸಂಪುಟದಲ್ಲಿನ ಏಕೈಕ ಮಹಿಳಾ ಸಚಿವೆಯಾಗಿ ಅವರು ಹೊಸ ರಾಜಕೀಯ ಚರ್ಚೆಗೆ ಕಾರಣರಾಗಿದ್ದಾರೆ. ಇದೇ ವೇಳೆ, ತಮಿಳುನಾಡಿನ 13ನೇ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ವಿಜಯ್, ಜನತೆ ನೀಡಿದ ಜನಾದೇಶಕ್ಕೆ ಕೃತಜ್ಞತೆ ಸಲ್ಲಿಸಿದರು. ಧರ್ಮನಿರಪೇಕ್ಷತೆ ಮತ್ತು ಸಾಮಾಜಿಕ ನ್ಯಾಯದ ಆಧಾರದ ಮೇಲೆ ಹೊಸ ಆಡಳಿತ ಕಟ್ಟುವ ಸಂಕಲ್ಪ ವ್ಯಕ್ತಪಡಿಸಿದ ಅವರು, "ಇದು ಹೊಸ ಆರಂಭ, ಹೊಸ ಯುಗದ ಆರಂಭ" ಎಂದು ಹೇಳಿದರು.

# ಮಲಘಾಣದಲ್ಲಿ ನೂತನ ಸರಕಾರಿ ಪದವಿ ಪೂರ್ವ ಕಾಲೇಜು ಆರಂಭ

**ಬೆಳಗಾವಿ ವಾರ್ತೆ ಕೊಲ್ಹಾರ:** ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ವಾಗಲಿ ಎಂಬ ಕಾರಣದಿಂದ ಕರ್ನಾಟಕ ಘನ ಸರ್ಕಾರ ,ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ ವಿಭಾಗ) ಇದರ ಅಡಿಯಲ್ಲಿ ಮಲಘಾಣದಲ್ಲಿ ವಾಣಿಜ್ಯ ವಿಭಾಗವು ಆರಂಭಗೊಂಡಿದ್ದು ಆಸಕ್ತ ವಿದ್ಯಾರ್ಥಿಗಳು ವಾಣಿಜ್ಯ ವಿಭಾಗಕ್ಕೆ ಸೇರ್ಪಡೆಗೊಳ್ಳುವುದರ ಮೂಲಕ ನೂತನವಾಗಿ ಆರಂಭಗೊಂಡ ಕಾಲೇಜಿನ ಔನ್ನತ್ಯಕ್ಕೆ ಕಾರಣರಾಗಬೇಕು ಎಂದು ವಿಜಯಪುರ ಜಿಲ್ಲೆಯ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಚಂದ್ರಶೇಖರ್ ಹೊಸಮನಿ ಅವರು ಹೇಳಿದರು.

ಅವರು ಇತ್ತೀಚೆಗೆ ಕೊಲ್ಹಾರ ತಾಲೂಕಿನ ಮಲಘಾಣದಲ್ಲಿ ಆರಂಭಗೊಂಡ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಭಾರವನ್ನು ವಹಿಸಿಕೊಳ್ಳುತ್ತಿರುವ ಬಸವರಾಜ ಜಾಲವಾದಿಯವರ ಸ್ವಾಗತ ಹಾಗೂ ಗ್ರಾಮದ ಶಿಕ್ಷಣ ಪ್ರೇಮಿಗಳನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ನೂತನ ಕಾಲೇಜಿಗೆ ಅತ್ಯಂತ ಚಟುವಟಿಕೆಯಿಂದ ಕೂಡಿದ, ಹಾಗೂ ಕಳೆದ ವರ್ಷದ ರಾಜ್ಯ ಮಟ್ಟದ ಉತ್ತಮ ಉಪನ್ಯಾಸಕ ಪ್ರಶಸ್ತಿ ಪಡೆದ ಉಪನ್ಯಾಸಕರಾದ ಬಸವರಾಜ ಜಾಲವಾದಿಯವರನ್ನು ತಮ್ಮ ಗ್ರಾಮಕ್ಕೆ ಪ್ರಾಚಾರ್ಯರನ್ನಾಗಿ ನೇಮಿಸಿದ್ದೇವೆ. ಪ್ರೌಢಶಾಲೆ, ಗ್ರಾಮದ ಗುರುಹಿರಿಯರು ಹಾಗೂ ಶಿಕ್ಷಣ ಪ್ರೇಮಿಗಳ ಸಹಕಾರ ತುಂಬಾ ಅಗತ್ಯವಾಗಿದೆ ಎಲ್ಲರೂ ಜೊತೆಜೊತೆಯಾಗಿ ಗ್ರಾಮದ ಶೈಕ್ಷಣಿಕ ಕ್ರಾಂತಿಗೆ ಕೈ ಜೋಡಿಸೋಣ ಎಂದರು.

ಕಾಲೇಜಿ ಪ್ರಭಾರ ವಹಿಸಿಕೊಂಡ ಪ್ರಾಂಶುಪಾಲ ಬಸವರಾಜ ಜಾಲವಾದಿ ಮಾತನಾಡಿ

ಗ್ರಾಮದವರ ಪರಿಶ್ರಮ ಹಾಗೂ ಈ ಭಾಗದ ಶಾಸಕರ ಪ್ರಾಮಾಣಿಕ ಪ್ರಯತ್ನದಿಂದ ಮಲಘಾಣದಲ್ಲಿ ಸರಕಾರಿ ಪದವಿ ಪೂರ್ವ ಕಾಲೇಜು ಸ್ಥಾಪನೆಯಾಗಿ ಈಗಾಗಲೇ ಪ್ರವೇಶಗಳು ಆರಂಭಗೊಂಡಿವೆ ಹೆಚ್ಚು ಹೆಚ್ಚು ವಿದ್ಯಾರ್ಥಿಗಳು ಕಾಮರ್ಸ್ ವಿಭಾಗಕ್ಕೆ ಹೆಸರು ನೊಂದಾವಣೆ ಮಾಡಿಕೊಳ್ಳಬೇಕೆಂದು ಸಲಹೆ ನೀಡಿ ಪ್ರೌಢ'ಶಾಲೆ ಹಾಗೂ ಗ್ರಾಮದ ಗುರುಹಿರಿಯರ ಹಾಗೂ ಶಿಕ್ಷಣ ಪ್ರೇಮಿಗಳ ಸಹಕಾರ ಅಗತ್ಯವಾಗಿದೆ ಮುಂದಿನ ದಿನಮಾನಗಳಲ್ಲಿ ತಮ್ಮಿಂದ ನಾವು ಅದನ್ನು ನಿರೀಕ್ಷಿಸುತ್ತೇವೆ ಎಂದರು.

ಪ್ರೌಢಶಾಲೆ ಮುಖ್ಯೋಪಾಧ್ಯಾಯ ರಾಮಣ್ಣ ನಾವಿ ಮಾತನಾಡಿ ನಮ್ಮ ಗ್ರಾಮದಲ್ಲಿಯೇ ಕಾಲೇಜು ಆರಂಭವಾಗುತ್ತಿರುವುದು ಸಂತಸ ದಾಯಕ



ವಿಚಾರ .ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗಂತೂ ನಿಜಕ್ಕೂ ಖುಷಿ ತರುವ ಸಂಗತಿ ಏಕೆಂದರೆ ವಾಣಿಜ್ಯ ವಿಭಾಗಕ್ಕೆ ಸೇರಲು ಬೇರೆ ಬೇರೆ ಕಡೆಗೆ ತೆರಳಬೇಕಿತ್ತು ಅದೀಗ ನಮ್ಮ ಗ್ರಾಮದಲ್ಲೇ ಆರಂಭವಾಗುತ್ತಿರುವುದು ಸಂತಸ ತಂದಿದೆ ಎಂದರು .ಗ್ರಾಮದ ಎಲ್ಲ ಗುರು ಹಿರಿಯರು ಶಿಕ್ಷಣ ಪ್ರೇಮಿಗಳು ಕೈಜೋಡಿಸಿ ಹೆಚ್ಚು ವಿದ್ಯಾರ್ಥಿಗಳು ಕಾಮರ್ಸ್ ವಿಭಾಗಕ್ಕೆ ಹೆಸರು ನೋಂದಾಯಿಸಲು ಮನವಿ ಮಾಡಿಕೊಂಡು ಪ್ರೌಢಶಾಲೆಗೆ ಸಹಕಾರ ನೀಡಿದಂತೆ ನೂತನವಾಗಿ ಆರಂಭ'ವಾದ ಕಾಲೇಜಿನ ಪ್ರಾಚಾರ್ಯರಿಗೂ ಹಾಗೂ ಸಿಬ್ಬಂದಿಗೂ ಸಹಕಾರ ನೀಡಲು ಕೋರಿದರು.

ವೇದಿಕೆಯ ಮೇಲೆಖಆಒಅ ಅಧ್ಯಕ್ಷರಾದ ಬಸವರಾಜ ಕೋರಿ, ರಾಮಣ್ಣ ನಾವಿ,

ಈ ಸಂದರ್ಭದಲ್ಲಿ ಕುಪಗಡ್ಡಿ ಕಾಲೇಜಿನ ಪ್ರಾಚಾರ್ಯ ದೊಡಮನಿ ಹಾಗೂ ಉಪನ್ಯಾಸಕ ಮದಕರಿ ಹಾಜರಿದ್ದರು

ಗ್ರಾಮದ ಪ್ರಮುಖರಾದ ಅಶೋಕ ನಿಂಗ'ನ'ೂರ', ಸ'ದಾನ'ಂದ' ನಿಂಗನೂರ,ರಮೇಶ ನಿಂಗನೂರ

ಶಿವಾನಂದ ಕಾಗಲ್ ರಮೇಶ ರಾಠೋಡ ಹಾಗೂ ಹಿರಿಯ ಶಿಕ್ಷಕರಾದ ಜಿ.ಎಸ್ ಗಣಿಯವರ, ಕನ್ನಡ ಪಂಡಿತ ಎಸ್.ಎಮ್ .ಕರ್ನಾಳ ಶಾಲೆಯ ಎಸ್.ಡಿ .ಸಿ ಎಸ್.ಬಿ ಐನಾಪುರ್ ಜೆ.ಬಿ .ಮಠಪತಿ, ಹಾಗೂ ಇನ್ನಿತರರು ಈ ಸಂದರ್ಭದಲ್ಲಿ ಹಾಜರಿದ್ದರು.

# ಓದುವ ಸಂಸ್ಕೃತಿ ಬೆಳೆಸಿಕೊಳ್ಳಬೇಕು: ಕುಶಾಲ



**ಬೆಳಗಾವಿ ವಾರ್ತೆ ವಿಜಯಪುರ:** ಪುಸ್ತಕಗಳಿಂದ ಮನೆ ಶೃಂಗಾರಗೊಂಡರೆ ಮಕ್ಕಳ ಮನಸ್ಸು ಜ್ಞಾನದಿಂದ ಶೃಂಗಾರವಾಗುತ್ತದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಜಿಲ್ಲಾ ಜಾಗೃತ ಸಮಿತಿ ಸದಸ್ಯ ಡಾ. ಕುಶಾಲ ಬರಗೂರ ಹೇಳಿದರು.

ನಗರದ ಸ್ವಾತಂತ್ರ್ಯ ಯೋಧರ ಕಾಲನಿಯ ಸಾಹಿತಿ ಸಂಗಮೇಶ ಬದಾಮಿ ಅವರ ನಿವಾಸದಲ್ಲಿ ಹಮ್ಮಿಕೊಂಡ ಮನೆಗೊಂದು ಗ್ರಂಥಾಲಯ ಅನುಷ್ಠಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇವರ ಮನೆಯಲ್ಲಿ ದೇವರು ಕಾಣುವ ಹಾಗೆ ಮನೆ ಪ್ರವೇಶಿಸಿದೊಡನೆ ಗ್ರಂಥಗಳು ಕಾಣಬೇಕು. ಅಂದಾಗ ಓದುವ ಸಂಸ್ಕೃತಿ ಬೆಳೆಯುತ್ತದೆ. ಮೊಬೈಲ್ ಗೀಳು ಕಡಿಮೆಯಾಗಿ ಓದುವ ಆಸಕ್ತಿ ಹೆಚ್ಚುತ್ತದೆ ಎಂದರು. ಅತಿಥಿ ಶಂಕರ ಬೈಚಬಾಳ ಮಾತನಾಡಿ, ಹನ್ನೆರಡನೇ ಶತಮಾನದಲ್ಲಿ ವಚನಕ್ರಾಂತಿಗೆ ನಾಂದಿ ಹಾಡಿದ ಬಾಗೇವಾಡಿಯ ಬಸವಣ್ಣನವರ ವಚನಗಳು ನಮಗೆ ದಾರಿದೀಪ. ಅಂಥ ವಚನ ಗ್ರಂಥಗಳನ್ನು ಓದಿದರೆ ವ್ಯಕ್ತಿತ್ವ ವಿಕಸನವಾಗಬಲ್ಲದು ಎಂದರು.

ಸಾಹಿತಿ ಸಂಗಮೇಶ ಬದಾಮಿ ಮಾತನಾಡಿ, ಮನೆಯಲ್ಲಿ ಪುಸ್ತಕಗಳಿದ್ದರೆ ಸಾಲದು. ಇಷ್ಟಪಟ್ಟು ಓದಬೇಕು. ಆಗ ಪುಸ್ತಕ ಸಂಸ್ಕೃತಿ ಉಳಿಯುತ್ತದೆ. ಅಂತರ್ಜಾಲದ ಹಾವಳಿಯಲ್ಲಿ ಓದನ್ನು ನಿರ್ಲಕ್ಷಿಸದೆ ಓದು ನಮ್ಮ ಗುರಿಯಾಗಬೇಕು ಎಂದರು.

ಮಲ್ಲಿಕಾರ್ಜುನ ಅಮರಣ್ಣವರ ಅಧ್ಯಕ್ಷತೆ ವಹಿಸಿದ್ದರು.

ಬಸವರಾಜ ಸಾಲವಾಡಗಿ ಸ್ವಾಗತಿಸಿದರು. ಪ್ರಾಧಿಕಾರದ ಸದಸ್ಯ ಮುರುಗೇಶ ಸಂಗಮ ನಿರೂಪಿಸಿದರು. ಎಸ್.ಡಿ.ಜೋಶಿ ವಂದಿಸಿದರು.

ಕಾರ್ಯಕ್ರಮದಲ್ಲಿ ಸಿದ್ದು ಯರನಾಳ, ಸಾಕ್ಷಿ ಚವ್ಹಾಣ ಬಸವರಾಜ ಒಂಟಗೋಡಿ, ಹರ್ಷ ಮಲಘಾಣ ಅಂಬಾದಾಸ ಚವ್ಹಾಣ ವಿದ್ಯಾಲಕ್ಷ್ಮಿ ಬದಾಮಿ ಮತ್ತಿತರರು ಉಪಸ್ಥಿತರಿದ್ದರು.

# ಕಸಾಪ ಕನ್ನಡ ನಾಡು–ನುಡಿಯ ಪ್ರಾತಿನಿಧಿಕ ಸಂಸ್ಥೆ: ದೇಸಾಯಿ

**ಬೆಳಗಾವಿ ವಾರ್ತೆ ತಾಳಿಕೋಟೆ:** ಕನ್ನಡ ಸಾಹಿತ್ಯ ಪರಿಷತ್ತು ನಾಡು–ನುಡಿ. ನೆಲ–ಜಲ ಹಾಗೂ ಸಂಸ್ಕೃತಿ  ಸಂಸ್ಕಾರವನ್ನೂ ಉಳಿಸುವ ಹಾಗೂ ಬೆಳೆಸುವ ಕಾರ್ಯ ನಿರಂತರವಾಗಿ ಪ್ರಾತಿನಿಧಿಕ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು ತನ್ನ ಕತ9ವ್ಯವನ್ನು ಪಾಲಿಸುತ್ತಿದೆ ಎಂದು ಹಿರಿಯ ಸಾಹಿತಿ ಹಾಗೂ ವಿಶ್ರಾಂತ ಲೆಕ್ಕ ಪರಿಶೋಧಕ ಸಿದ್ದಣ್ಣ ದೇಸಾಯಿ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಳಿಕೋಟೆ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಾಲಯದಲ್ಲಿ 112 ನೇ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡುತ್ತಿದ್ದ ಅವರು ನಾಲ್ವಡಿ ಕೃಷ್ಣರಾಜ ಒಡೆಯರ 1915 ರಲ್ಲಿ ಸ್ಥಾಪನೆ ಮಾಡಿದ ಸರ್ಕಾರದ ಪ್ರಾತಿನಿಧಿಕ ಸಂಸ್ಥೆ ಕಸಾಪ ಇಂದು ಹೆಮ್ಮರವಾಗಿ ಬೆಳೆದು ಕನ್ನಡ ಸಾಹಿತ್ಯಕ್ಕೆ ಅಪಾರವಾದ ಕೊಡುಗೆ ನೀಡುತ್ತಾ ಬಂದಿರುವದು ಅತ್ಯಂತ ಶ್ಲಾಘನೀಯ ಕಾರ್ಯ ಎಂದರು.

ತಾಳಿಕೋಟೆ ತಾಳಿಕೋಟೆ ಕನ್ನಡ



ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ರೇವಣಸಿದ್ದಪ್ಪ ಕೊಪ್ಪದ ಅಧ್ಯಕ್ಷತೆ ವಹಿಸಿ ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತು ಅನೇಕ ವಿಷಯಗಳ ಕುರಿತು ಉಪನ್ಯಾಸ. ಚಿಂತನ. ಗೋಷ್ಠಿ. ಕವನ ವಾಚನ. ರಂಗಭೂಮಿ ಕಲೆ ಮುಂತಾದ ವಿಷಯಗಳ ಕುರಿತು ಉಪನ್ಯಾಸ ಕಾರ್ಯಕ್ರಮ ಮಾಡುವದರ ಮೂಲಕ ಕನ್ನಡ ಸಾಹಿತ್ಯ ಕ್ಷೇತ್ರವನ್ನು ವಿಸ್ತರಿಸಿದ ಕೀರ್ತಿ ಕಸಾಪಕ್ಕೆ ಸಲ್ಲುತ್ತದೆ ಎಂದರು.


ಗೌರವ ಕೋಶಾಧ್ಯಕರಾದ ರಾಜು ಹಂಚಾಟೆ ಹಾಗೂ ಪದಾಧಿಕಾರಿಗಳಾದ ಬಿ ಆರ್ ಪೊ?ಲಿಸಪಾಟೀಲ ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡಿಗರ ಹೆಮ್ಮೆಯ ಸಂಸ್ಥೆ. ಆಡಳಿತ ಭಾಷೆ. ಮಾತೃಭಾಷೆ ಕನ್ನಡವಾಗಿದ್ದು ಎಲ್ಲರೂ ಕಡ್ಡಾಯವಾಗಿ ಕನ್ನಡವನ್ನು ಕಲಿಯಬೇಕೆಂದರು.

ವಿಶ್ರಾಂತ ಶಿಕ್ಷಕರಾದ ಬಿ ಟಿ ಸಜ್ಜನ. ಪದಾಧಿಕಾರಿಗಳಾದ ಜೈ ಭೀಮ ಮುತ್ತಗಿ, ಕುಮಾರಿ ಶ್ವೇತಾ ಯರಗಲ್ಲ, ಎಂ.ಎಚ್. ಹಂದ್ರಾಳ, ಆರ್ ಬಿ ದಾನಿ. ಅಬೂಬಕರ ಲಾಹೋರಿ. ನಬಿ ಲಾಹೋರಿ. ಮೊದಲಾದವರು ಉಪಸ್ಥಿತರಿದ್ದರು.

# ರೇಲ್ವೆ ಕೆಳಸೇತುವೆ ನಿರ್ಮಾಣ ವೇಳೆ ಅಗತ್ಯವಾಗಿರುವ ಸೌಕರ್ಯಗಳ ಸ್ಥಳಾಂತರ ಕೇಂದ್ರದ ಜವಾಬ್ದಾರಿ: ಎಂಬಿಪಾ

**ಬೆಳಗಾವಿ ವಾರ್ತೆ ವಿಜಯಪುರ:** ರೇಲ್ವೆ ಕೆಳಸೇತುವೆ ನಿರ್ಮಾಣ ವೇಳೆ ಅಗತ್ಯವಾಗಿರುವ ಸೌಕರ್ಯಗಳ ಸ್ಥಳಾಂತರ ಜವಾಬ್ದಾರಿ ರೇಲ್ವೆ ಇಲಾಖೆಗೆ ಸೇರಿದ್ದು, ಇದರಲ್ಲಿ ರಾಜ್ಯ ಸರಕಾರದ ಪಾತ್ರ ಇರುವುದಿಲ್ಲ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ರೇಲ್ವೆ ಇಲಾಖೆ ಕೈಗೊಳ್ಳುವ ಕೆಳಸೇತುವೆ ನಿರ್ಮಾಣ ಸಂದರ್ಭದಲ್ಲಿ ಅಗತ್ಯ ವಿರುವ ವಿದ್ಯುತ್ ಮಾರ್ಗ ಗಳು, ಒಳಚರಂಡಿ ವ್ಯವಸ್ಥೆ ಹಾಗೂ ಇತರ ಭೂಗತ ಸೌಲಭ್ಯಗಳ ಸ್ಥಳಾಂತರ ಕೆಲಸ ರೇಲ್ವೆ ಇಲಾಖೆ ಕಾಮಗಾರಿಯ



ವ್ಯಾಪ್ತಿಯಲ್ಲಿಯೇ ಬರುತ್ತದೆ. ದೇಶಾದ್ಯಂತ ಇದೇ ಪದ್ಧತಿ ಅನುಸರಿಸಲಾಗುತ್ತಿದೆ. ಆದರೆ, ಸಂಸದ ರಮೇಶ ಜಿಗಜಿಣಗಿ ಅವರು ವಿಜಯ ಪುರ ನಗರದ ವಜ್ರಹನುಮಾನ ರೇಲ್ವೆ ಗೇಟ್ ಬಳಿ ಕೆಳಸೇತುವೆ ನಿರ್ಮಾಣದ ವಿಷಯದಲ್ಲಿ ರೇಲ್ವೆ ಇಲಾಖೆ ಮಾಡಬೇಕಾದ ಕೆಲಸದ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯದೆ ರಾಜ್ಯ ಸರಕಾರದ ವಿರುದ್ಧ ಮಾಡಿರುವ ಆರೋಪ ನಿರಾಧಾರವಾಗಿದೆ ಎಂದು ಅವರು ತಿಳಿಸಿದ್ದಾರೆ. ಸಂಸದರಿಗೆ ಜಿಲ್ಲೆಯ ಅಭಿವೃದ್ಧಿಯ ಬಗ್ಗೆ ನಿಜವಾದರೂ ಕಾಳಜಿ ಇದ್ದರೆ ತಮ್ಮ ಪ್ರಭಾವ ಬಳಸಿ ರೇಲ್ವೆ ಇಲಾಖೆಯಿಂದ ಅಗತ್ಯವಿರುವ ಅನುದಾನ ತಂದು ಕಾಮಗಾರಿ ಪೂರ್ಣ ಗೊಳಿಸಬೇಕು. ಆದನ್ನು ಬಿಟ್ಟು ರಾಜ್ಯ ಸರಕಾರದ ವಿರುದ್ಧ ಆರೋಪಿಸುವುದು ಸರಿಯಲ್ಲ ಎಂದು ಸಚಿವ ಎಂ. ಬಿ. ಪಾಟೀಲ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೋಂ ಸ್ಟೇಗಳಿಗೆ ನೋಂದಣಿ ಕಡ್ಡಾಯ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಜಿಲ್ಲೆಯಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳನ್ನು ವೇಗವಾಗಿ ವಿಸ್ತರಿಸುತ್ತಿರುವ ಹಿನ್ನಲೆಯಲ್ಲಿ ಅನಧಿಕೃತವಾಗಿ ಕಾರ್ಯ ನಿರ್ವಹಿಸುತ್ತಿರುವ ಹೋ ಸ್ಟೇ ಘಟಕಗಳನ್ನು ನಿಯಂತ್ರಿಸಿ, ಪ್ರವಾಸಿಗರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ವಸತಿ ವ್ಯವಸ್ಥೆ ಒದಗಿಸುವ ಉದ್ದೇಶದಿಂದ ಪ್ರವಾಸೋದ್ಯಮ ಇಲಾಖೆಯು ಕಡ್ಡಾಯ ನೋಂದಣಿ ವ್ಯವಸ್ಥೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತಂದಿದೆ.

ಇತ್ತೀಚಿನ ದಿನಗಳಲ್ಲಿ ಬಾದಾಮಿ, ಪಟ್ಟದಕಲ್ಲು, ಐಹೊಳೆ, ಕೂಡಲಸಂಗಮ ಸೇರಿದಂತೆ ವಿವಿಧ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿರುವುದರಿಂದ ಅನೇಕ ಕಡೆಗಳಲ್ಲಿ ಅನುಮತಿ ಇಲ್ಲದೇ ಹೋಂ ಸ್ಟೇಗಳು ಕಾರ್ಯನಿರ್ವಹಿಸುತ್ತಿರುವುದು ಗಮನಕ್ಕೆ ಬಂದಿದೆ. ಇಂತಹ ಅನಧಿಕೃತ ಘಟಕಗಳು ಪ್ರವಾಸಿಗರ ಸುರಕ್ಷತೆ, ಸ್ವಚ್ಛತೆ, ಸರ್ಕಾರದ ನಿಯಮಗಳು ಹಾಗೂ ಸಾರ್ವಜನಿಕ ಶಾಂತಿ, ಸುವ್ಯವಸ್ಥೆಗೆ ಧಕ್ಕೆಯನ್ನುಂಟು ಮಾಡುವ ಸಾಧ್ಯತೆ ಇದೆ.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಹೋಂ ಸ್ಟೇ ಮಾಲಿಕರು ಕರ್ನಾಟಕ ಸರ್ಕಾರದ ಪ್ರವಾಸೋದ್ಯಮ ಇಲಾಖೆಯ ಮಾರ್ಗಸೂಚಿಗಳ ಪ್ರಕಾರ ಕಡ್ಡಾಯವಾಗಿ ನೋಂದಣಿ ಪಡೆದು, ಕಾನೂನು ಬದ್ಧವಾಗಿ ಕಾರ್ಯಾಚರಣೆ ಮಾಡಬೇಕು. ನೋಂದಣಿ ಪ್ರಕ್ರಿಯೆಯಲ್ಲಿ ಕಟ್ಟಡದ ಸುರಕ್ಷತೆ, ಸೌಲಭ್ಯಗಳು, ಅಗ್ನಿ ನಿಯಂತ್ರಣ ವ್ಯವಸ್ಥೆ, ಸ್ವಚ್ಛತೆ, ಕುಡಿಯುವ ನೀರು, ಶೌಚಾಲಯ, ಅತಿಥಿಗಳ ದಾಖಲೆ ಸಂಗ್ರಹಣೆ, ಪೊಲೀಸ್ ಪರಿಶೀಲನೆ ಸೇರಿದಂತೆ ಅನೇಕ ಅಂಶಗಳನ್ನು ಪರಿಶೀಲಿಸಲಾಗುತ್ತದೆ.

ಹೋಂ ಸ್ಟೇ ಮಾಲಿಕರು ತಮ್ಮ ಘಟಕಗಳನ್ನು ನೋಂದಾಯಿಸಿಕೊಳ್ಳಲು ಅಗತ್ಯ ದಾಖಲೆಗಳಾದ ಗುರುತಿನ ಪತ್ರ, ಆಸ್ತಿ ದಾಖಲೆಗಳು, ಕಟ್ಟಡ ಅನುಮತಿ, ಪೊಲೀಸ್ ನಿರಾಕ್ಷೇಪಣಾ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಕೊಠಡಿ ಸಂ.137, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ವಿಳಾಸಕ್ಕೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001